ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 157 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 04–01–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 157 | Title- Code: KARKAN 28269 | Chitradurga | Date: 04-01-2024 Thursday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಮಾನವೀಯತೆಯ ಸಂದೇಶಗಳು ಸಮಾಜಕ್ಕೆ ತಲುಪಬೇಕು: ಮುಖ್ಯಮಂತ್ರಿ ಸಿದ್ದರಾಮಯ್ಯ 2
ಪದವಿ, ಡಿಪ್ಲೊಮಾ ಉತ್ತೀರ್ಣರಾದವರಿಗೆ 5ನೇ ಗ್ಯಾರಂಟಿ ಯುವನಿಧಿ: ಜಿಲ್ಲಾಧಿಕಾರಿ 3
ಜಾಹಿರಾತು ಸಂಹಿತೆ ಪಾಲನೆ ಮಾಡುವುದು ಕಡ್ಡಾಯ; ಜಿಲ್ಲಾಧಿಕಾರಿ 4

ಸುದ್ದಿ, ಜಾಹಿರಾತಿಗೆ 9686622252

### ಶುಭ ನುಡಿ

ಕೋಪವು ಪ್ರೀತಿಯನ್ನು, ನಾಶಗೊಳಿಸಿದರೆ, ಅಹಂಕಾರವು ಸಭ್ಯತೆಯನ್ನು ನಾಶಮಾಡುತ್ತದೆ.. ಇದೆಲ್ಲಕ್ಕಿಂತ ಹೆಚ್ಚಾಗಿ, ಸಂಶಯ, ಅನುಮಾನವು ಬದುಕನ್ನೇ ನಾಶಗೊಳಿಸುತ್ತದೆ..

» ಶುಭೋದಯ

## ತಹಶೀಲ್ದಾರ್ ಕಚೇರಿಗೆ ಬರುವವರ ಕಣ್ಣೀರು ಒರೆಸುವುದಕ್ಕಿಂತ ಪುಣ್ಯದ ಕೆಲಸ ಬೇರೆ ಇಲ್ಲ

# ಮಧ್ಯವರ್ತಿಗಳನ್ನು ನಿಮ್ಮ ಕಚೇರಿ ಬಳಿ ಸೇರಿಸದೆ ಜನರ ಸೇವೆ ಮಾಡಿ: ಸಿಎಂ

» ಬೆಂಗಳೂರು

ತಹಶೀಲ್ದಾರ್ ಕಚೇರಿಗೆ ಬರುವವರ ಕಣ್ಣೀರು ಒರೆಸುವುದಕ್ಕಿಂತ ಪುಣ್ಯದ ಕೆಲಸ ಬೇರೆ ಇಲ್ಲ. ಮಾಸಲು ಬಟ್ಟೆಯಲ್ಲಿ ಚಡ್ಡಿಯಲ್ಲಿ ಬರುವ ಬಡವರ ಕಣ್ಣೀರು ಒರೆಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಕರ್ನಾಟಕ ಆಡಳಿತಾ ಸೇವಾ ಅಧಿಕಾರಿಗಳ ಸಂಘದ 2024ನೇ ಸಾಲಿನ ದಿನಚರಿ ಮತ್ತು ವಾರ್ಷಿಕ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದರು.

ಸವೆದ ಚಪ್ಪಲಿ, ಹರಕಲು ಚೆಡ್ಡಿ, ಮಾಸಿದ ಬಟ್ಟೆ, ಅವಿದ್ಯಾವಂತರ ಪರವಾಗಿ ನಿಮ್ಮಗಳ ಹೃದಯ ಮಿಡಿಯಬೇಕು. ನೀವು ಒಳ್ಳೆ ಕೆಲಸ ಮಾಡಿದರೆ ಸರ್ಕಾರಕ್ಕೆ ಒಳ್ಳೆ ಹೆಸರು ಬರುತ್ತದೆ. ಈ ಜವಾಬ್ದಾರಿಯನ್ನು ನಿರ್ವಹಿಸಿ, ಮಧ್ಯವರ್ತಿಗಳನ್ನು ನಿಮ್ಮ ಕಚೇರಿ ಬಳಿ ಸೇರಿಸದೆ ಜನರ ಸೇವೆ ಮಾಡಿ ಎಂದರು.

ನಾವು ನೀವು ರಾಜ್ಯದ 7 ಕೋಟಿ ಜನರ ಹಿತ ಕಾಯುವುದಕ್ಕಾಗಿ ಇದ್ದೇವೆ. ರಾಜಕಾರಣಿಗಳು ಜನರಿಂದ ರಿನೀವಲ್ ಆದರೆ ಮಾತ್ರ ಐದು ವರ್ಷದ ಬಳಿಕವೂ ಜನ ಸೇವೆಯಲ್ಲಿ ಇರ್ತಾರೆ. ಆದರೆ ಕೆಎಎಸ್ ಅಧಿಕಾರಿಗಳು 30 ವರ್ಷಗಳ ಕಾಲ ನಿರಂತರ ಜನ ಸೇವೆಯಲ್ಲಿ ಇರುತ್ತೀರಿ. ಆದ್ದರಿಂದ ಹೆಚ್ಚು ಜನಪರವಾಗಿ ಇದ್ದು ಜನರ ಕಷ್ಟ ಸುಖಗಳಿಗೆ ಸ್ಪಂದಿಸಿ ಎಂದು ಕರೆ ನೀಡಿದರು.

ರಾಜಕಾರಣಗಳಿಗೆ, ಅಧಿಕಾರಿಗಳಿಗೆ ಜನರು ಸವಲತ್ತುಗಳನ್ನು ಒದಗಿಸಿದ್ದಾರೆ. ಜನರ ತೆರಿಗೆ ಹಣದಲ್ಲಿ ನಮಗೆ ಸವಲತ್ತುಗಳು ಸಿಕ್ಕಿವೆ. ಸುಗಮ ಜನಪರ ಆಡಳಿತ ಕೊಡಲಿ ಎನ್ನುವ ಕಾರಣದಿಂದ ಜನರಿಂದ ನಮಗೆ ಸವಲತ್ತು ಸಿಕ್ಕಿವೆ. ಜನರ ಅಭ್ಯುದಯ ನಮ್ಮ ಗುರಿ ಆಗಬೇಕು ಎಂದರು.

ಬಲಾಢ್ಯರು ದುರ್ಬಲರ ಮೇಲೆ ದೌರ್ಜನ್ಯ ನಡೆಸದಂತೆ ಎಚ್ಚರಿಕೆ ವಹಿಸಿ. ಸರ್ಕಾರದ ಸವಲತ್ತುಗಳನ್ನು ಅರ್ಹ ಫಲಾನುಭವಿಗಳಿಗೆ ಪರಿಣಾಮಕಾರಿಯಾಗಿ ತಲುಪಿಸಿ ಎಂದು ಕರೆ ನೀಡಿದರು.

ಸಣ್ಣ ಪುಟ್ಟ ರೆವಿನ್ಯೂ ಸಮಸ್ಯೆಗಳಿಗೆ ಜನರು ಸಿಎಂ ಬಳಿಗೆ ಬರುತ್ತಾರೆ ಎಂದರೆ ಅಧಿಕಾರಿಗಳು ಜನರ ಸಮಸ್ಯೆಗೆ ಸ್ಪಂದಿಸುತ್ತಿಲ್ಲ ಎಂದೇ ಪರಿಗಣಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಕೆಎಎಸ್ ಅಧಿಕಾರಿಗಳ ಸಂಘದ ಅಧ್ಯಕ್ಷರಾದ ಶಿವಸ್ವಾಮಿ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಕಂದಾಯ ಸಚಿವರಾದ ಕೃಷ್ಣಬೈರೇಗೌಡ, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಬೈರತಿ ಸುರೇಶ್, ಸರ್ಕಾರದ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಕಂದಾಯ ಇಲಾಖೆ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ, ಕಂದಾಯ ಇಲಾಖೆ ಆಯುಕ್ತರಾದ ಪಿ.ಸುನಿಲ್ ಕುಮಾರ್, ಸಂಘದ ಉಪಾಧ್ಯಕ್ಷರಾದ ಚನ್ನಬಸಪ್ಪ ಅವರು ವೇದಿಕೆಯಲ್ಲಿದ್ದರು.



## ಫೀಡರ್ ಸೌರೀಕರಣ ಯೋಜನೆ: ಸರ್ಕಾರಿ ಜಾಗ ಗುರುತಿಸಿ ತ್ವರಿತವಾಗಿ ಹಸ್ತಾಂತರಿಸಲು ಮುಖ್ಯಮಂತ್ರಿ ಸೂಚನೆ

» ಬೆಂಗಳೂರು

PM-KUSUM Component ಅ ಯೋಜನೆಯಡಿ ಫೀಡರ್ ಸೌರೀಕರಣಕ್ಕಾಗಿ ರಾಜ್ಯದ 400 ಉಪಕೇಂದ್ರಗಳ ಬಳಿ ಸೌರ ವಿದ್ಯುತ್ ಘಟಕ ಸ್ಥಾಪನೆಗೆ ಇಂಧನ ಇಲಾಖೆಗೆ ಜಮೀನು ಹಸ್ತಾಂತರಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ಕೂಡಲೇ ಕಾರ್ಯಪ್ರವೃತ್ತರಾಗಿ ಕ್ರಮ ವಹಿಸಲು ಸುತ್ತೋಲೆ ಹೊರಡಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಕಒ–ಏಗಖಗಒ ಅಂಟಠಿಂಟಿಜಟಿಣ ಅ ಯೋಜನೆಗೆ ಗುರುತಿಸಿದ ಸರ್ಕಾರಿ ಭೂಮಿಯನ್ನು ಯೋಜನೆಯ ಅನುಷ್ಠಾನಕ್ಕಾಗಿ ಕಂದಾಯ ಇಲಾಖೆಗೆ ಹಸ್ತಾಂತರಿಸುವ ಕುರಿತು ಉನ್ನತ ಮಟ್ಟದ ಸಭೆ ನಡೆಸಿದರು. 400 ವಿದ್ಯುತ್ ಉಪಕೇಂದ್ರಗಳ ಸಮೀಪದಲ್ಲಿ ಫೀಡರ್ ಸೌರೀಕರಣ ಅನುಷ್ಠಾನಕ್ಕಾಗಿ 3000 ಎಕರೆ ಭೂಮಿ ಅಗತ್ಯವಿದೆ.

ಜಿಲ್ಲಾಧಿಕಾರಿಗಳಿಗೆ ಭೂಮಿ ಹಂಚಿಕೆ ಮಾಡಲು ಅಧಿಕಾರ ಪ್ರತ್ಯಾಯೋಜನೆ ಮಾಡಿದರೆ ತ್ವರಿತವಾಗಿ ಯೋಜನೆ ಅನುಷ್ಠಾನ ಮಾಡಲು ಸಾಧ್ಯವಿದೆ. ಇದರಿಂದ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ಹೊತ್ತಿನಲ್ಲೇ ವಿದ್ಯುತ್ ಪೂರೈಕೆ ಮಾಡಲು ಸಹ ಸಾಧ್ಯವಾಗುವುದು ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು ಇಂಧನ ಇಲಾಖೆಯ ಸಂಬಂಧಿಸಿದ ಅಧಿಕಾರಿಗಳು ಸ್ಥಳೀಯ ತಹಸೀಲ್ದಾರರೊಂದಿಗೆ ಜಮೀನು ಗುರುತಿಸಿ, ಸೂಕ್ತ ಪ್ರಸ್ತಾವನೆ ಕೂಡಲೇ ಕಳುಹಿಸಿ, ಹಸ್ತಾಂರಕಕ್ಕೆ ಕ್ರಮ ಕೈಗೊಳ್ಳಲು ಸೂಚಿಸಿದರು. ಕಂದಾಯ ಇಲಾಖೆಯು ಇಂಧನ ಇಲಾಖೆಗೆ ಭೂಮಿಯನ್ನು ಲೀಸ್ ಆಧಾರದಲ್ಲಿ ಹಸ್ತಾಂತರಿಸಲು ಸೂಚಿಸಿದರು.

ಪುಟ 2

### ಫೆ.29 ರಿಂದ ಮಾರ್ಚ್ 7ರವರೆಗೆ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವ

ಪುಟ 2

### ಫಾಸ್ಟ್ ನ್ಯೂಸ್

## ರಾಮನ ಹೆಸರು ಇಟ್ಟುಕೊಂಡಿರೋ ಸಿದ್ದರಾಮಯ್ಯಗೆ ಒಳ್ಳೆಯದಾಗಲಿ: ಸ್ವಾಮಿಜಿ



» ರಾಯಚೂರು

ರಾಮನ ಹೋಲಿಕೆಯನ್ನು ಇತರರಿಗೆ ಹೋಲಿಸುವಂತದ್ದಲ್ಲಾ ರಾಮನ ಹೆಸರನ್ನ ಸಿದ್ದರಾಮಯ್ಯ ಇಟ್ಟುಕೊಂಡಿದ್ದಾರೆ. ಆದ್ದರಿಂದ ರಾಮನ ಆದರ್ಶ ಹಾಗೂ ರಾಮನ ಜನಾನುರಾಗ ಸಿದ್ದರಾಮಯ್ಯನು (ಸಿದ್ದರಾಮಯ್ಯ) ಸಹ ಪಡೆಯಲಿ. ಅವರಿಗೂ ನಾವು ಅಭಿನಂದಿಸೋಣ ಅಂತ ಮಂತ್ರಾಲಯ ಮಠದ ಪೀಠಾಧಿಪತಿ ಸುಬುಧೇಂದ್ರ ತೀರ್ಥಸ್ವಾಮಿ ಹೇಳಿದ್ದಾರೆ. ರಾಯಚೂರಿನಲ್ಲಿ ಮಾತನಾಡಿದ ಮಂತ್ರಾಲಯ (ಮಂತ್ರಾಲಯ)ಶ್ರೀಗಳು,ಸಿಎಂ ಸಿದ್ದರಾಮಯ್ಯರನ್ನ ರಾಮನಿಗೆ ಹೋಲಿಕೆ ವಿಚಾರಕ್ಕೆ ಯಾವ ಹೇಳಿಕೆ ಕೊಟ್ಟಿದ್ದಾರೆ ಎಂಬುದನ್ನು ನಾನು ಗಮನಿಸಿಲ್ಲ. ರಾಮ ಎಲ್ಲ ರೀತಿಯಿಂದಲೂ ಅನುಕರಣೀಯ ಹಾಗೂ ಆದರ್ಶ ವ್ಯಕ್ತಿ. ನೀನು ಹೇಗಿರಬೇಕು ಅಂತ ಹೇಳುವಾಗ ರಾಮನಂತೆ ನೀನು ಇರು ಅಂತ ದೃಷ್ಟಾಂತ ಎಲ್ಲರೂ ಕೊಡುತ್ತಾರೆ. ಯಾರೊಂದಿಗೂ ಹೋಲಿಕೆ ಸರಿಯಲ್ಲ ಸಿದ್ದರಾಮಯ್ಯನವರಿಗೂ ಒಳ್ಳೆಯದಾಗಲಿ ಎಂದರು. ಭಾರತೀಯರ, ದೇಶದ ಹಿಂದೂಗಳ ಬಹುದಿನಗಳ ಕನಸು ಈಗ ನನಸಾಗುತ್ತಿದೆ. ಅಯೋಧ್ಯೆಯಲ್ಲಿ (ಅಯೋಧ್ಯೆ) ರಾಮಮಂದಿರ ನಿರ್ಮಾಣದ ಬೇಡಿಕೆಯಿದೆ. ಮಂದಿರ ಲೋಕಾರ್ಪಣೆ ರಾಮ ದಿನ ನಾವು ನಿರೀಕ್ಷಿಸುತ್ತೇವೆ. ವಿದ್ಯುತ್ ಪ್ಯಾನಲ್ ಚಾ□□□□ನ ಸಾಂಕೇತಿಕವಾಗಿ ಲೋಕಾರ್ಪಣೆ ಮಾಡಿ ಬಂದಿದ್ದೇವೆ ಅಂತ ಮಂತ್ರಾಲಯ ಶ್ರೀ ಹೇಳಿದರು.ರಾಮ ವಿಗ್ರಹದ ಶಿಲೆ ಹಾಗೂ ಶಿಲ್ಪಿ ಕನ್ನಡಿಗರು ಅನ್ನೋದು ನಮ್ಮ ಹೆಮ್ಮೆ. ಹೀಗಾಗಿ ನಾವೆಲ್ಲ ಕನ್ನಡಿಗರು ಅಭಿನಂದಿಸಬೇಕು. ರಾಮ ಉತ್ತರದಿಂದ ದಕ್ಷಿಣಕ್ಕೆ ಬಂದು ಮತ್ತೆ ಉತ್ತರಕ್ಕೆ ಹೋದ. ದಕ್ಷಿಣದಿಂದ ಉತ್ತರಕ್ಕೆ ಬಾಲರಾಮನ ವಿಗ್ರಹ ಹೋಗುತ್ತಿರುವುದು ದಕ್ಷಿಣ ಉತ್ತರಗಳ ಅನುಸಂಧಾನ ಸನ್ನಿವೇಶ ಅಂತ ಮಂತ್ರಾಲಯ ರಾಯರ ಮಠದ ಪೀಠಾಧಿಪತಿ ಸುಬುಧೇಂದ್ರ ತೀರ್ಥ ಸ್ವಾಮಿ ಹೇಳಿದ್ದಾರೆ.

## ಬೇಸಿಕ್, ಅಡ್ವಾನ್ಸ್ ಕೋರ್ಸ್‌ಗಳ ತರಬೇತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಪ್ರಸಕ್ತ ಸಾಲಿನ ಅಲ್ಪಸಂಖ್ಯಾತರ ಕೌಶಲ್ಯ ಅಭಿವೃದ್ಧಿ ಯೋಜನೆಯಡಿ ಬೇಸಿಕ್ ಮತ್ತು ಅಡ್ವಾನ್ಸ್ ಕೋರ್ಸ್ ಕುರಿತಾದ ತರಬೇತಿ ನೀಡಲು ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಲ್ಪಸಂಖ್ಯಾತರ ಸಮುದಾಯದ(ಮುಸ್ಲಿಂ,ಕ್ರಿಶ್ಚಿಯನ್,ಜೈನ್,ಬೌದ್ಧ, ಸಿಖ್, ಪಾರ್ಸಿ) ಅಭ್ಯರ್ಥಿಗಳು ಜ.5 ರೊಳಗಾಗಿ ಆನ್‌ಲೈನ್ www.dom.karanataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಅಲ್ಪಸಂಖ್ಯಾತರ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ತಿಳಿಸಿದ್ದಾರೆ.



## ಫಾಸ್ಟ್ ನ್ಯೂಸ್

### ವ್ಯಕ್ತಿ ಕಾಣೆ

» ಚಿತ್ರದುರ್ಗ



ನಗರದ ಚಿಕ್ಕಪೇಟೆ ನಿವಾಸಿ ಹೆಚ್.ಪಿ.ವಿಜಯಕುಮಾರ್ (50) ಎಂಬ ವ್ಯಕ್ತಿಯು 2023ರ ಅಕ್ಟೋಬರ್ 11ರಂದು ಕಾಣೆಯಾಗಿರುವ ಪ್ರಕರಣ ಚಿತ್ರದುರ್ಗ ನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ. ಹೆಚ್.ಪಿ.ವಿಜಯಕುಮಾರ್ ತಂದೆ ಪಾಶ್ವನಾಥಪ್ಪ, 50 ವರ್ಷ, ಸಾಧಾರಣ ಮೈಕಟ್ಟು, ಸುಮಾರು 5.5 ಅಡಿ ಎತ್ತರ, ಕೋಲುಮುಖ, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಂದರ್ಭದಲ್ಲಿ ಬಳಿ ಬಣ್ಣದ ಶರ್ಟ್, ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಈ ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಕುರಿತು ಮಾಹಿತಿ ತಿಳಿದುಬಂದಲ್ಲಿ ಚಿತ್ರದುರ್ಗ ನಗರ ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ಚಿತ್ರದುರ್ಗ ನಗರ ಪೊಲೀಸ್ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಫೀಡರ್ ಸೌರೀಕರಣ ಯೋಜನೆ: ಸರ್ಕಾರಿ ಜಾಗ ಗುರುತಿಸಿ ತ್ವರಿತವಾಗಿ ಹಸ್ತಾಂತರಿಸಲು ಮುಖ್ಯಮಂತ್ರಿ ಸೂಚನೆ

» ಮೊದಲ ಪುಟದಿಂದ

ಆದರೆ ಈ ಆಸ್ತಿಯನ್ನು ಇಂಧನ ಇಲಾಖೆ ಖಾಸಗಿಯವರಿಗೆ ಹಸ್ತಾಂತರಿಸುವಂತಿಲ್ಲ ಎಂಬ ಷರತ್ತಿನೊಂದಿಗೆ ಹಸ್ತಾಂತರಿಸಲು ಸೂಚಿಸಿದರು.

ಈ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ನಡೆಸಿ ಖುದ್ದು ಸೂಚನೆ ನೀಡುವುದಾಗಿ ಹಾಗೂ ಎಲ್ಲ ಜಿಲ್ಲಾ ಉಸ್ತುವಾರಿ ಸಚಿವರಿಗೂ ಈ ಕುರಿತು ಆದ್ಯತೆ ನೀಡಲು ಸೂಚಿಸುವುದಾಗಿ ತಿಳಿಸಿದರು. ಸಭೆಯಲ್ಲಿ ಇಂಧನ ಸಚಿವ ಕೆ.ಜೆ. ಜಾರ್ಜ್, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ಕೆ.ಗೋವಿಂದರಾಜು, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್, ಇಂಧನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ಮುಖ್ಯಮಂತ್ರಿಯವರ ಕಾರ್ಯದರ್ಶಿ ಡಾ. ಕೆ.ವಿ. ತ್ರಿಲೋಕಚಂದ್ರ, ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ ಮತ್ತು ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಸಿರಿಧಾನ್ಯ ನಡಿಗೆ ಕಾರ್ಯಕ್ರಮ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ಮತ್ತು ಕೃಷಿಕ ಸಮಾಜದ ಸಹಯೋಗದೊಂದಿಗೆ ಜ.4 ರಂದು ಅಂತರರಾಷ್ಟ್ರೀಯ ಸಿರಿಧಾನ್ಯ ವರ್ಷ ಎಂದು ಘೋಷಣೆ ಮಾಡಿರುವ ಪ್ರಯುಕ್ತ ಸಿರಿಧಾನ್ಯ ನಡಿಗೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಜಿಲ್ಲಾಧಿಕಾರಿ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಜಾಥಾ: ಬೆಳಿಗ್ಗೆ 7.15ಕ್ಕೆ ಜಯದೇವ ಸರ್ಕಲ್ ನಿಂದ ಪ್ರಾರಂಭಗೊಂಡು ಆರ್.ಹೆಚ್ ಕಲ್ಯಾಣ ಮಂಟಪ, ಹಳೇ ಪಿ.ಬಿ.ರಸ್ತೆ, ಎ.ವಿ.ಕೆ ಕಾಲೇಜು ರಸ್ತೆ, ರಾಮ್ ಅಂಡ್ ಕೋ ಸರ್ಕಲ್, ಚರ್ಚ್ ರಸ್ತೆ ಮಾರ್ಗವಾಗಿ ಗುಂಡಿ ಸರ್ಕಲ್ ನಲ್ಲಿ ಮಾನವ ಸರಪಳಿ ನಿರ್ಮಿಸಿ ಕಾಸಲ್ ಶ್ರೀನಿವಾಸ್ ಶೆಟ್ಟಿ ಪಾರ್ಕ್‌ನಲ್ಲಿ ಮುಕ್ತಾಯಗೊಳಿಸಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್ ತಿಳಿಸಿದ್ದಾರೆ.

### ಬೇಸಿಗೆ ಹಂಗಾಮಿಗೆ ನೀರು ಹರಿಸುವ ಕುರಿತು ಸಭೆ

» ದಾವಣಗೆರೆ

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರು, ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರಾದ ಮಧು ಬಂಗಾರಪ್ಪ ಅವರ ಅಧ್ಯಕ್ಷತೆಯಲ್ಲಿ ಜ.6 ರಂದು ಬೆಳಿಗ್ಗೆ 10.30ಕ್ಕೆ ಶಿವಮೊಗ್ಗದ ಮಲವಗೊಪ್ಪದಲ್ಲಿರುವ ಭದ್ರಾ ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರದ ಕಚೇರಿ ಸಭಾಂಗಣದಲ್ಲಿ ಭದ್ರಾ ಯೋಜನೆಯ ಅಚ್ಚುಕಟ್ಟು ಪ್ರದೇಶದ 2023-24ನೇ ಸಾಲಿನ ಬೇಸಿಗೆ ಹಂಗಾಮಿಗೆ ನೀರು ಹರಿಸುವ ಕುರಿತು ಸಭೆ ಆಯೋಜಿಸಲಾಗಿದೆ ಎಂದು ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಕ.ನೀ.ನಿ.ನಿ ಭದ್ರಾ ಯೋಜನಾ ವೃತ್ತ, ಬಿ.ಆರ್, ಪ್ರಾಜೆಕ್ಟ್‌ನ ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ.

### ವಾರ್ಷಿಕೋತ್ಸವ

» ದಾವಣಗೆರೆ

ನಗರದ ಶ್ರೀಸಿದ್ಧಗಂಗಾ ವಿದ್ಯಾಸಂಸ್ಥೆಯ ಆಶ್ರಯದಲ್ಲಿ ನಡೆಯುತ್ತಿರುವ ಸಿದ್ದಗಂಗಾ ಪದವಿ ಪೂರ್ವ ಕಾಲೇಜು, ಸಿದ್ಧಗಂಗಾ ಕಾಂಪೋಜಿಟ್ ಹೈಸ್ಕೂಲ್, ಸಿಬಿಎಸ್‌ಇ ಸ್ಕೂಲ್ ಮತ್ತು ನರ್ಸರಿ ಶಾಲೆಗಳ 54ನೇ ವಾರ್ಷಿಕ ಸಂಭ್ರಮವನ್ನು ಜನವರಿ 4, 5, 6ರಂದು ಮೂರು ದಿನಗಳ ಕಾಲ ಸಂಜೆ 5ರಿಂದ ಸಂಸ್ಥೆಯ ಆವರಣದಲ್ಲಿ ಏರ್ಪಡಿಸಲಾಗಿದೆ.

ಫೆಬ್ರವರಿ 29 ರಿಂದ ಮಾರ್ಚ್ 7 ರವರೆಗೆ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವ

# ಮಾನವೀಯತೆಯ ಸಂದೇಶಗಳು ಸಮಾಜಕ್ಕೆ ತಲುಪಬೇಕು: ಮುಖ್ಯಮಂತ್ರಿ ಸಿದ್ದರಾಮಯ್ಯ

» ಬೆಂಗಳೂರು



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಇಂದು ನಡೆದ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ ಸಂಘಟನಾ ಸಮಿತಿ ಸಭೆಯಲ್ಲಿ ಫೆಬ್ರವರಿ 29 ರಿಂದ ಮಾರ್ಚ್ 7 ರವರೆಗೆ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವವನ್ನು ಏರ್ಪಡಿಸಲು ತೀರ್ಮಾನಿಸಲಾಗಿದೆ.

ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ಇಂದು ಜರುಗಿದ ಸಂಘಟನಾ ಸಮಿತಿ ಸಭೆಯ ನಂತರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮುಖ್ಯಮಂತ್ರಿಗಳು ಈ ವಿಷಯ ತಿಳಿಸಿದರು.

ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ 15 ನೇ ಆವೃತ್ತಿಯನ್ನು ಫೆಬ್ರವರಿ 29 ರ ಸಂಜೆ ಉದ್ಘಾಟನೆಯನ್ನು ವಿಧಾನಸೌಧದ ಮುಂಭಾಗದಲ್ಲಿ ಏರ್ಪಡಿಸಲಾಗಿದೆ ಮುಖ್ಯಮಂತ್ರಿಗಳು ನೆರವೇರಿಸಲಿದ್ದಾರೆ. ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವ ದೇಶವಿದೇಶಗಳಲ್ಲಿ ಮನ್ನಣೆ ಪಡೆದಿರುವ ಚಿತ್ರೋತ್ಸವವಾಗಿದ್ದು, ವಿದೇಶಿ ಚಿತ್ರಗಳನ್ನು ಪ್ರದರ್ಶಿಸಲಾಗುವುದಲ್ಲದೆ, ಕನ್ನಡ ಸೇರಿದಂತೆ ದೇಶದ ವಿವಿಧ ಭಾಷಾ ಚಿತ್ರಗಳನ್ನು ಪ್ರದರ್ಶಿಸಲಾಗುವುದು. ಮಾರ್ಚ್ 7 ರಂದು ಸಮಾರೋಪ ಸಮಾರಂಭ ನಡೆಯಲಿದ್ದು ಅಂದು ರಾಜ್ಯಪಾಲರು ಪ್ರಶಸ್ತಿಗಳನ್ನು ವಿತರಿಸಲಿದ್ದಾರೆ. ಸಂಘಟನಾ ಸಮಿತಿ ಸಭೆಯ ಜೊತೆಗೆ ಕೋರ್ ಸಮಿತಿಯೂ ರಚನೆಯಾಗಿದ್ದು, ಸಮಾರಂಭ ಯಾವ ರೀತಿ ಏರ್ಪಡಿಸಬೇಕೆಂದು ತೀರ್ಮಾನವಾಗುತ್ತದೆ. ಕೋಮುವಾದದ, ಶಾಂತಿ, ಸಮಾನತೆ, ಲಿಂಗ ಸಮಾನತೆ, ಸೌಹಾರ್ದತೆ, ಮಾನವೀಯತೆಯ ಸಂದೇಶಗಳು ಸಮಾಜಕ್ಕೆ ತಲುಪಬೇಕು. ಬಹುತ್ವಕ್ಕೆ ಹೆಚ್ಚು ಒತ್ತು ಕೊಡುವ ರೀತಿಯಲ್ಲಿ ಚಲನಚಿತ್ರೋತ್ಸವ ನಡೆಯಲಿದೆ. ಹೆಚ್ಚು ಜನಪ್ರಿಯಗೊಳಿಸುವ ನಿಟ್ಟಿನಲ್ಲಿ ಅಗತ್ಯವಿರುವ ಆರ್ಥಿಕ ನೆರವನ್ನು ಸರ್ಕಾರ ಒದಗಿಸಲಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು. ಹಿಂದೆ ವಿಧಾನಸೌಧದ ಮುಂಭಾಗದಲ್ಲಿಯೇ ಅಂತರ ರಾಷ್ಟ್ರಿಯ ಚಲನಚಿತ್ರೋತ್ಸವದ ಉದ್ಘಾಟನೆಯಾಗುತ್ತಿತ್ತು. ದೇಶವಿದೇಶದ ಸಿನಿರಂಗದ ಪ್ರಖ್ಯಾತ ಕಲಾವಿದರನ್ನು ಕರೆಸಲಾಗುತ್ತಿದೆ. ಈ ಬಗ್ಗೆ ಇಂದಿನ ಸಭೆಯಲ್ಲಿ ಚರ್ಚಿಸಲಾಗಿದ್ದು, ಅಂತರರಾಷ್ಟ್ರಿಯ ಚಲನಚಿತ್ರೋತ್ಸವವನ್ನು ಯ ಶಸ್ವಿಯಾಗಲಿದೆ ಎಂಬ ವಿಶ್ವಾಸವಿದೆ ಎಂದರು.

# ವಿಜೃಂಭಣೆಯಿಂದ ಹಂಪಿ ಉತ್ಸವ ಆಚರಣೆಗೆ ಅಗತ್ಯ ಸಿದ್ದತೆಗೆ ಡಿಸಿ ಎಂ.ಎಸ್.ದಿವಾಕರ್ ಸೂಚನೆ

» ಹೊಸಪೇಟೆ



ಐತಿಹಾಸಿಕ ವಿಜಯನಗರ ಸಾಮ್ರಾಜ್ಯದ ಗತ ವೈಭವ ಸಾರುವ ಹಂಪಿ ಉತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ಎಲ್ಲಾ ಸಮಿತಿಗಳು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಹಂಪಿ ಉತ್ಸವ ಆಚರಣೆ ಕಾರ್ಯಕಾರಿ ಸಮಿತಿ ಅಧ್ಯಕ್ಷ, ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಹಂಪಿ ಉತ್ಸವ ಆಚರಣೆ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಬಾರಿಯ ಹಂಪಿ ಉತ್ಸವವನ್ನು ಫೆಬ್ರವರಿ 2, 3 ಮತ್ತು 4 ರಂದು ಆಚರಿಸಲು ನಿಗಧಿಪಡಿಸಲಾಗಿದೆ. ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಡೆಸಲು ಈಗಾಗಲೇ ಸ್ವಾಗತ ಮತ್ತು ಶಿಷ್ಟಾಚಾರ ಸಮಿತಿ, ಸಾರಿಗೆ ಸಮಿತಿ, ವಸತಿ ಸಮಿತಿ, ಆಹಾರ ಸಮಿತಿ, ಮಾಧ್ಯಮ ಸಮಿತಿ, ಮೂಲಭೂತ ಸೌಲಭ್ಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಸಮಿತಿ, ಆರೋಗ್ಯ ಮತ್ತು ನೈರ್ಮಲೀಕರಣ, ವಸ್ತು ಪ್ರದರ್ಶನ ಸಮಿತಿ, ವೇದಿಕೆ ಸಮಿತಿ, ಕ್ರೀಡಾ ಸೇರಿದಂತೆ ಸುಮಾರು 20ಕ್ಕೂ ಅಧಿಕ ಸಮಿತಿಗಳನ್ನು ರಚಿಸಿ, ಕಾರ್ಯ ಹಂಚಿಕೆ ಮಾಡಲಾಗಿದ್ದು, ಉತ್ಸವದ ಕಾರ್ಯಕ್ರಮಗಳು ವ್ಯವಸ್ಥಿತ ನಿರ್ವಹಣೆ ಆಗಬೇಕು.

ಈ ಹಿನ್ನಲೆಯಲ್ಲಿ ಎಲ್ಲಾ ಸಮಿತಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಉತ್ಸವದ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮ, ಕಬಡ್ಡಿ, ಕುಸ್ತಿ, ಸಾಹಸ ಕ್ರೀಡೆ ಮುಂತಾದ ಕ್ರೀಡಾಕೂಟಗಳು, ರಂಗೋಲಿ ಸ್ಪರ್ಧೆ, ವಿಜೃಂಭಣೆಯ ಸಾಂಸ್ಕೃತಿಕ ಕಲಾತಂಡಗಳ ಮೆರವಣಿಗೆ, ವಸ್ತು ಪ್ರದರ್ಶನ ಸೇರಿದಂತೆ ಹತ್ತು ಹಲವು ವೈವಿಧ್ಯಮಯ ಕಾರ್ಯಕ್ರಮಗಳ ಆಯೋಜನೆಗೆ ಸಂಬಂಧಿಸಿದ ಅಧಿಕಾರಿಗಳು ತ್ವರಿತವಾಗಿ ಕ್ರಮ ಕೈಗೊಳ್ಳಬೇಕು.


ಸ್ಥಳೀಯ ಕಲಾತಂಡಗಳಿಗೆ ಆದ್ಯತೆ ನೀಡಬೇಕಾಗಿದ್ದು, ಜಿಲ್ಲೆಯಲ್ಲಿರುವ ಹಗಲುವೇಷ, ಬುಡಕಟ್ಟು ಸಮುದಾಯದ ಕಲೆ, ವೀರಗಾಸೆ, ಮಹಿಳಾ ಡೊಳ್ಳು ಕುಣಿತ, ಕೋಲಾಟ, ಹಲಗೆ ವಾದನ, ಯಕ್ಷಗಾನ ಸೇರಿದಂತೆ ವಿವಿಧ ಸ್ಥಳೀಯ ಕಲಾಪ್ರಕಾರಗಳನ್ನು ಗುರುತಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಕ್ರಮ ವಹಿಸಬೇಕು.

ಕಾರ್ಯಕ್ರಮಕ್ಕೆ ಆಗಮಿಸುವ ಶಾಲಾ ಮಕ್ಕಳಿಗೆ ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರು, ಉಪಹಾರದವ್ಯವಸ್ಥೆಗೆಆಹಾರ ಇಲಾಖೆಯುಕ್ರಮ ಕೈಗೊಳ್ಳಬೇಕು. ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಸಾರ್ವಜನಿಕರಿಗೆ ಅನುಕೂಲವಾಗಲು ಜಿಲ್ಲೆಯ ಎಲ್ಲ ತಾಲೂಕು ಕೇಂದ್ರಗಳಿಂದ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಸಾರಿಗೆ ಇಲಾಖೆಯಿಂದ ಹಂಪಿಗೆ ವಿಶೇಷ ಬಸ್ ವ್ಯವಸ್ಥೆ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಹಂಪಿ ಉತ್ಸವದ ಅಂಗವಾಗಿ ಶಾಲಾ ಮಕ್ಕಳ ನೃತ್ಯ, ಚಿತ್ರಕಲಾ, ಪ್ರಬಂಧ ಸ್ಪರ್ಧೆಗಳು, ಮೇಳಗಳು ಹಾಗೂ ಇತರೆ ಕಾರ್ಯಕ್ರಮಗಳ ಆಯೋಜನೆ ಕುರಿತಂತೆ ಜಿಲ್ಲಾಡಳಿತಕ್ಕೆ ಮಾಹಿತಿ ನೀಡಿ, ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಹಂಪಿ ಉತ್ಸವವನ್ನು ವ್ಯವಸ್ಥಿತವಾಗಿ ಹಾಗೂ ಯಶಸ್ವಿಯಾಗಿ ಆಚರಿಸಲು ಎಲ್ಲಾ ಅಧಿಕಾರಿಗಳು ಶ್ರಮಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸದಾಶಿವ ಪ್ರಭು ಬಿ., ಅಪರ ಜಿಲ್ಲಾಧಿಕಾರಿ ಅನುರಾಧ ಜಿ., ಸೇರಿದಂತೆ ವಿವಿಧ ಸಮಿತಿಗಳ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು ಇದ್ದರು.

# ಧಾರ್ಮಿಕ ಕಾರ್ಯಗಳು ಭಾಂದವ್ಯ ಬೆಸೆಯುವ ತಾಣಗಳು: ಶಾಸಕ



» ಚಳ್ಳಕೆರೆ

ಧಾರ್ಮಿಕ ಕಾರ್ಯಕ್ರಮಗಳು ಸಮಾಜದಲ್ಲಿ ಶಾಂತಿ ಉಂಟುಮಾಡುವ ಕಾರ್ಯಮಾಡುತ್ತವೆ. ನಮ್ಮ ಸಂಸ್ಕೃತಿಯ ಪ್ರತೀಕವಾದ ಆಚರಣೆಗಳು ಹೆಚ್ಚು, ಹೆಚ್ಚು ನಡೆಯಬೇಕು ಎಂದು ಶಾಸಕ ಟಿ.ರಘುಮೂರ್ತಿ ಹೇಳಿದರು.ಅವರು, ತಾಲ್ಲೂಕಿನ ಕರೀಕೆರೆ ಗ್ರಾಮದಲ್ಲಿ ನಡೆದ ಶ್ರೀ ಚಿದಾನಂದೇಶ್ವರ ಸ್ವಾಮಿಯ ಕಾರ್ತಿಕೋತ್ಸವದಲ್ಲಿ ಪಾಲ್ಗೊಂಡು, ಗ್ರಾಮಸ್ಥರು ನೀಡಿದ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದರು. ಗ್ರಾಮಗಳಲ್ಲಿ ನಡೆಯುವ ಪ್ರತಿಯೊಂದು ಆಚರಣೆ ಮಾನವ ಸಂಬಂಧಗಳ ಮದ್ಯ ಭಾಂದವ್ಯ ಬೇಸೆಯುತ್ತವೆ. ಗ್ರಾಮದ ಪ್ರತಿ ಮನೆಯಲ್ಲೂ ಶ್ರದ್ದೆ, ಭಕ್ತಿಯಿಂದ ಆಚರಣೆಮಾಡುವುದರಿಂದ ಗ್ರಾಮದಲ್ಲಿ ಶಾಂತಿ ನೆಲೆಯೂರಲಿದೆ. ಭಾರತೀಯ ಪರಂಪರೆಯಲ್ಲಿ ಧಾರ್ಮಿಕ ಕಾರ್ಯಗಳಿಗೆ ತಲತಲಾಂತರಗಳಿಂದ ಹೆಚ್ಚಿನ ಮಹತ್ವ ನೀಡುತ್ತಾ ಬಂದಿದ್ದೇವೆ. ಆಧುನಿಕತೆಯಲ್ಲೂ ನಮ್ಮ ಸಂಸ್ಕೃತಿ, ಆಚರಣೆಗಳಿಗೆ ಧಕ್ಕೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರತಿಯೊಬ್ಬರಲ್ಲೂ ಇರಬೇಕು ಎಂದರು.ಹಿರಿಯ ಮುಖಂಡ ಮಂಜುನಾಥ ಚೌಧರಿ ಮಾತನಾಡಿ, 12ನೇ ಶತಮಾನದಿಂದ 21ನೇ ಶತಮಾನದವರೆಗೂ ನಮ್ಮ ಧಾರ್ಮಿಕ ಕಾರ್ಯ, ಆಚರಣೆಗಳಿಗೆ ಯಾವುದೇ ಚ್ಯುತಿ ಬಾರದಂತೆ ನೋಡಿಕೊಂಡಿದ್ದೇವೆ. ಇನ್ನೂ ಮುಂದೆಯೂ ನಮ್ಮ ಸಂಸ್ಕೃತಿಯನ್ನು ಉಳಿಸುವತ್ತ ಯುವ ಸಮೂಹ ಮಂದಾಗಬೇಕು. ಸಮಾಜದ ಪ್ರತಿಯೊಂದು ಕ್ಷೇತ್ರದ ಯಶಸ್ಸಿಗೆ ನಮ್ಮ ಆಚರಣೆಯೇ ಮೂಲ ತಳಹದಿಯಾಗಿವೆ.

# ನಗರದ ಪ್ರವಾಸಿ ಮಂದಿರದ ಮುಂಭಾಗ ಸಿಗ್ನಲ್ ಅಳವಡಿಸಲು ಮನವಿ

» ಚಿತ್ರದುರ್ಗ



ಪಾದಚಾರಿಗಳು, ಜನಸಾಮಾನ್ಯರು ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ನಗರದ ಪ್ರವಾಸಿ ಮಂದಿರದ ಮುಂಭಾಗದ ವೃತ್ತದಲ್ಲಿ ಸಿಗ್ನಲ್ ಅಳವಡಿಸಿ, ಸಂಚಾರಿ ಪೊಲೀಸ್‌ನ್ನು ನೀಡಿ ಸುಗಮ ರಸ್ತೆ ಸಾರಿಗೆ ಅನುವು ಮಾಡಿಕೊಡುವ ನಿಟ್ಟಿನಲ್ಲಿ ಸೂಕ್ತ ಸುರಕ್ಷಿತ ಕ್ರಮಗಳನ್ನುಕೈಗೊಳ್ಳಬೇಕೆಂದು ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳ ಪರವಾಗಿ ಶಿಕ್ಷಕರು & ಪದವೀಧರರ ಕಾಂಗ್ರೆಸ್ ವಿಭಾಗದವತಿಯಿಂದ ಜಿಲ್ಲಾಡಳಿತವನ್ನು ಒತ್ತಾಯಿಸಿ ಮನವಿಯನ್ನು ಸಲ್ಲಿಸಲಾಯಿತು.


ಚಿತ್ರದುರ್ಗ ನಗರದ ಹೃದಯ ಭಾಗದಲ್ಲಿರುವ ಪ್ರವಾಸಿ ಮಂದಿರದ ಮುಂಭಾಗದಲ್ಲಿ ಕ್ಷೇತ್ರಶಿಕ್ಷಣಾಧಿಕಾರಿಗಳ ಕಚೇರಿ, ಸರ್ಕಾರಿ ಶಾಲೆ ಮತ್ತು ಕಾಲೇಜುಗಳು ಹಾಗೂ ಪ್ರವಾಸಿ ಮಂದಿರ ಇದ್ದು. ತಾಲ್ಲೂಕು ಕಚೇರಿ ಕಡೆಯಿಂದ ವಾಹನಗಳು ಏಕಮುಖ ರಸ್ತೆಯಲ್ಲಿ ವಿರುದ್ಧವಾಗಿ ಬರುತ್ತವೆ ಮತ್ತು ಪ್ರವಾಸಿ ಮಂದಿರದ ಮುಂಭಾಗದಲ್ಲಿ ಒಂದು ಬಸ್ ನಿಲ್ದಾಣ ಮತ್ತು ಅದರ ಎದುರುಗಡೆ ಇರುವ ಓಲ್ಕ್ ಮಿಡಲ್ ಶಾಲೆ ಮೈದಾನದ ಗೇಟ್ ಪಕ್ಕದಲ್ಲಿ ಆಟೋ ಸ್ಟಾಂಡ್ ಮತ್ತು ಬಹುಗಾಲಿಗಳ ವಾಹನ ಮತ್ತು ಬಸ್ಸ್ ಗಳಿಗೆ ನಿಲ್ದಾಣವಿದ್ದು, ಅಂಬೇಡ್ಕರ್ ವೃತ್ತದ ಕಡೆಯಿಂದ ಬರುವ ವಾಹನಗಳು ಲಿಡ್ಕರ್ ಬಿಲ್ಡಿಂಗ್ ಹಾಗೂ ಕೆ.ಎಫ್.ಸಿ ಬ್ಯಾಂಕ್ ಕಡೆಗೆ ಹೋಗಲು ವಾಹನಗಳು ತಿರುಗಿ ಗಾಂಧಿ ವೃತ್ತದಿಂದ ಬರುವ ವಾಹನಗಳಿಗೆ ಅಡ್ಡವಾಗಿ ಸಂಚರಿಸುವ ಬಹು ಮುಖ್ಯ ವೃತ್ತ ಇದಾಗಿರುತ್ತದೆ.

ಅತ್ಯಂತ ವಾಹನ ದಟ್ಟಣೆ ಇರುವ ಇಂತಹ ವೃತ್ತದಲ್ಲಿ ಶಾಲೆ ಮತ್ತು ಕಾಲೇಜುಗಳನ್ನು ಪ್ರಾರಂಭಿಸುವ ಮತ್ತು ಬಿಡುವ ಸಮಯಗಳಲ್ಲಿ ಕ್ಷೇತ್ರಶಿಕ್ಷಣಾಧಿಕಾರಿಗಳ ಕಚೇರಿಯ ಸಿಬ್ಬಂಧಿ ವಾಹನಗಳು, ಹಳೇ ಮಾಧ್ಯಮಿಕ ಮೈದಾನದಿಂದ ಹೊರಗೆ ಬರುವುದು ಮತ್ತು ಒಳಗೆ ಹೋಗುವುದರಿಂದ ಮತ್ತು ಸದರಿ ಮೈದಾನದಲ್ಲಿ ಕ್ರೀಡೆಗಳು ನಡೆಯುವ ಸಂದರ್ಭದಲ್ಲಿ ಮತ್ತಿತರೆ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಾಹನ ದಟ್ಟಣೆಯಿಂದಾಗಿ ವಿದ್ಯಾರ್ಥಿಗಳಿಗೆ ಅತ್ಯಂತ ತೊಂದರೆ ಮತ್ತು ತೀವ್ರ ಸಮಸ್ಯೆ ಉಂಟಾಗುತ್ತಿರುವುದನ್ನು ವಿದ್ಯಾರ್ಥಿಗಳ ಪೋಷಕರು ಹಾಗೂ ಸದರಿ ವೃತ್ತದ ಸುತ್ತಮುತ್ತಲಿನ ಅಂಗಡಿ ಮುಂಗಟ್ಟುಗಳಲ್ಲಿ ಇರುವ ಸಾರ್ವಜನಿಕರು ಮತ್ತು ಪಾದಚಾರಿಗಳು ಹಾಗೂ ಅನೇಕ ವಿದ್ಯಾರ್ಥಿ ಸಂಘಟನೆಗಳು ಶಿಕ್ಷಕರು & ಪದವೀಧರರ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಬಂದು ದಿನ ನಿತ್ಯ ದೂರುಗಳನ್ನು ನೀಡುತ್ತಿರುತ್ತಾರೆ.

## ಪ್ರಮುಖ ಸುದ್ದಿ

# ಪುನೀತ್ ಜನಸೇವಾ ಟ್ರಸ್ಟ್‌ವತಿಯಿಂದ ಕ್ಯಾಲೆಂಡರ್

» ಹೊಸದುರ್ಗ



ಪುನೀತ್ ರವರ ಸೇವಾ ಮನೋಭಾವ ಸಮಾಜಕ್ಕೆ ಮಾದರಿಯಾಗಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ತಾಲ್ಲೂಕು ಅಧ್ಯಕ್ಷ ಬಸ್ತಿಹಳ್ಳಿ ರಾಜಣ್ಣ ತಿಳಿಸಿದರು.

ತಾಲ್ಲೂಕಿನ ಕಂಚಿನಗರದ ಕಚೇರಿ ಆವರಣದಲ್ಲಿ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು

ಪುನೀತ್ ರಾಜಕುಮಾರ್ ಇಂದು ನಮ್ಮೊಂದಿಗೆಇಲ್ಲದಿದ್ದರೂಮನಸ್ಸಿನಲ್ಲಿಸದಾ ಇದ್ದಾರೆ ಅವರ ಸೇವಾ ಮನೋಬಾವನೆ ಪ್ರತಿಯೊಬ್ಬ ಕನ್ನಡಿಗರಲ್ಲೂ ಬರಬೇಕು ಎಂದರು.

ಡಾ.ಪುನೀತ್ ರಾಜಕುಮಾರ್ ಜನಸೇವಾ ಟ್ರಸ್ಟ್ ಅಧ್ಯಕ್ಷ ಎಸ್ ಜಗದೀಶ್ ಮಾತನಾಡಿ ಈಗಾಗಲೇ ಜನ ಸೇವಾ ಟ್ರಸ್ಟ್ ವತಿಯಿಂದ ಹಲವಾರು ಜನಪರ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಮುಂದೆಯು ಇಂತಹ ಜನಪರ ಕಾರ್ಯಕ್ರಮಗಳನ್ನು ಮುಂದುವರಿಸಿಕೊಂಡು ಹೋಗುತ್ತೇವೆ ಎಂದು ಇದೆ ವೇಳೆ ಅವರು ತಿಳಿಸಿದರು.

ಈಗಾಗಲೇ ಉಚಿತ ಆರೋಗ್ಯ ಶಿಬಿರ ಕಣ್ಣಿನ ಆಪರೇಷನ್ ಹಾಗೂ ಉಚಿತ ಕನ್ನಡಕಗಳನ್ನು ವಿತರಿಸುವ ಕಾರ್ಯಕ್ರಮ ಶಾಲಾ ಮಕ್ಕಳಿಗೆ ಉಚಿತ ಪುಸ್ತಕ ವಿತರಣೆ ಕಾರ್ಯಕ್ರಮ ಹಾಗೂ ಹಲವಾರು ಸಾಮಾಜಿಕ ಕಳಕಳಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮಗಳು ಕೇವಲ ಸೇವೆಯ ಉದ್ದೇಶದಿಂದ ಮಾಡುತ್ತೇವೆ ಹೊರತು ಯಾವುದೇ ಹಣ ಗಳಿಸುವ ಅಥವಾ ಲಾಭಗಳಿಸುವ ಉದ್ದೇಶದಿಂದ ಮಾಡುವುದಿಲ್ಲ. ಡಾ ಪುನೀತ್ ರವರ ಸೇವಾ ಮನೋಭಾವನೆ ನಮ್ಮ ಸಂಘದಲ್ಲಿ ನಿರಂತರವಾಗಿ ಮುಂದುವರೆಸಿಕೊಂಡು ಹೋಗುವುದಾಗಿ ಇದೇ ವೇಳೆ ಅವರು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಟ್ರಸ್ಟಿನ ಸುಮಿತ್ರಾ ಕೆ.ಸ್ಟಾರ್ ರೆಕ್ರಿಯೇಷನ್ ಅಧ್ಯಕ್ಷರಾದ ಪ್ರಸನ್ನ ಕುಮಾರ್ ವಕೀಲರಾದ ನಿಂಗರಾಜು. ನ್ಯಾಯಾಂಗ ಇಲಾಖೆಯ ಶಿರಸ್ತೇದಾರ ರಾದ ಶ್ರೀನಿವಾಸ್ ಶಿಕ್ಷಕರಾದ ಗಂಗಾಧರ್ ಪತ್ರಕರ್ತರಗಳಾದ ಕಿರಣ್ ಸಿದ್ದೇಶ್ವರ್ ಮಿಥುನ್.

ಕೆಪಿಟಿಸಿಎಲ್ ಇಂಜಿನಿಯರ್ ಶಾಮ್

ಮುಖಂಡರಾದ ಹರೀಶ್ ಆರ್ ಹೇಮಾ ಮಂಜುನಾಥ್ ಲೋಕೇಶ್ ಉಷಾ ಅಂಜು ಮೊದಲಾದವರು ಹಾಜರಿದ್ದರು

# ಶ್ರೀಕಾಂತ ಪೂಜಾರಿ ಬಂಧನ: ಪ್ರತಿಭಟನೆ

» **ಚಿತ್ರದುರ್ಗ**

ಹುಬ್ಬಳ್ಳಿಯಲ್ಲಿ ಶ್ರೀಕಾಂತ ಪೂಜಾರಿಯನ್ನು ಬಂಧಿಸಿ ಹಿಂದೂ ವಿರೋಧಿ ನೀತಿ ಅನುಸರಿಸುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ದ ಭಾರತೀಯ ಜನತಾಪಾರ್ಟಿ ಕಾರ್ಯಕರ್ತರು ಒನಕ್ಕೆ ಓಬವ್ವ ವೃತ್ತದಲ್ಲಿ ಬುಧವಾರ ಪ್ರತಿಭಟನೆ ನಡೆಸಿ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ದ ಧಿಕ್ಕಾರಗಳನ್ನು ಕೂಗಿದರು.

ಹಿಂದೂ ವಿರೋಧಿ, ರೈತ ವಿರೋಧಿ, ಶ್ರೀರಾಮನ ವಿರೋಧಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ದ ಪ್ರತಿಭಟನಾಕಾರರು ಹರಿಹಾಯ್ದರು.

ಪ್ರತಿಭಟನೆಯ ನೇತೃತ್ವ ವಹಿಸಿ ಮಾತನಾಡಿದ ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ 31 ವರ್ಷದ ಹಿಂದಿನ ಕೇಸನ್ನು ಕೆದಕಿ ಶ್ರೀಕಾಂತ್ ಪೂಜಾರಿ ಹಾಗೂ ಹಿಂದೂ ಕಾರ್ಯಕರ್ತರನ್ನು ಬಂಧಿಸಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಮುಸ್ಲಿಂರನ್ನು ಓಲೈಸಿಕೊಳ್ಳುವುದಕ್ಕಾಗಿ ಹಿಂದೂ ವಿರೋಧಿ ಅನುಸರಿಸುತ್ತಿದೆ. ಅಯೋಧ್ಯೆಯಲ್ಲಿ ನಡೆದ ಕರ ಸೇವೆಯಲ್ಲಿ ಜಿಲ್ಲೆಯಿಂದ ಐದುನೂರು ಕಾರ್ಯಕರ್ತರು ಭಾಗವಹಿಸಿದ್ದರು. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ತಾಕತ್ತಿದ್ದರೆ ಅವರೆಲ್ಲರನ್ನು ಬಂಧಿಸಲಿ ಎಂದು ಸವಾಲು ಹಾಕಿದರು.

1980 ರಲ್ಲಿ ಕೇಂದ್ರದಲ್ಲಿ ಬಿಜೆಪಿ. ಅಧಿಕಾರಕ್ಕೆ ಬಂದಾಗ ಅಯೋಧ್ಯೆಯಲ್ಲಿ ರಾಮ ಮಂದಿರ ಕಟ್ಟುವುದಾಗಿ ದೇಶದ ಜನತೆಗೆ ವಚನ ನೀಡಿತ್ತು. ಅದರಂತೆ ಎಲ್.ಕೆ.ಅಡ್ವಾಣಿ, ಮುರಳಿ ಮನೋಹರ್ ಜೋಶಿ ನೇತೃತ್ವದಲ್ಲಿ ರಥಯಾತ್ರೆ ಕೂಡ ದೇಶದೆಲ್ಲೆಡೆ ಸಂಚರಿಸಿದ್ದನ್ನು ಜನ ಮರೆತಿಲ್ಲ.

ನಮ್ಮ ಪಕ್ಷ ಕೊಟ್ಟ ಮಾತಿನಂತೆ ರಾಮ ಮಂದಿರ ಕಟ್ಟುತ್ತಿದೆ. ಇಡಿ ಜಗತ್ತು ರಾಮಮಂದಿರದ ಕಡೆ ನೋಡುತ್ತಿರುವ ಇಂತಹ ಪರಿಸ್ಥಿತಿಯಲ್ಲಿ ಹುಬ್ಬಳ್ಳಿಯಲ್ಲಿ ಹಿಂದೂ ಕಾರ್ಯಕರ್ತರನ್ನು ಬಂಧಿಸುವ ಅಗತ್ಯವಾದರೂ ಕಾಂಗ್ರೆಸ್ ಸರ್ಕಾರಕ್ಕೆ ಏನಿತ್ತು ಎಂದು ಪ್ರಶ್ನಿಸಿದರು?

ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೆಲ್ಲಾ ಹಿಂದೂಗಳ ಮೇಲೆ ದೌರ್ಜನ್ಯ ನಡೆಯುತ್ತಿರುತ್ತದೆ. ಸಾಮರಸ್ಯ ಹಾಳು ಮಾಡುವ ಕೆಲಸಕ್ಕೆ ಕೈಹಾಕಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಿಂದೂಗಳ ಭಾವನೆಗೆ ಧಕ್ಕೆ ತರುತ್ತಿದ್ದಾರೆ. ಶ್ರೀಕಾಂತ ಪೂಜಾರಿಯನ್ನು ಕೂಡಲೆ ಬಿಡುಗಡೆಗೊಳಿಸಿ ಅವರ ಮೇಲೆ ದಾಖಲಿಸಿರುವ ಕೇಸನ್ನು ವಜಾ ಮಾಡದಿದ್ದರೆ ಪ್ರತಿ ತಾಲ್ಲೂಕು ಹಾಗೂ ಮಂಡಲ, ಶಕ್ತಿ ಕೇಂದ್ರಗಳಲ್ಲಿ ಹೋರಾಟ ನಡೆಸಲಾಗುವುದೆಂದುಎ.ಮುರಳಿಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ರಾಮ ಮಂದಿರ ನಿರ್ಮಾಣದ ಹಿಂದೆ ಲಕ್ಷಾಂತರ ಕಾರ್ಯಕರ್ತರ ಬಲಿದಾನವಿದೆ. ರಾಮನ ಶಾಪ ನಿಮಗೆ ತಟ್ಟುತ್ತದೆ. ಇದೇ ರೀತಿ ಹಿಂದೂಗಳ ಮೇಲೆ ದೌರ್ಜನ್ಯ ಹೆಚ್ಚುತ್ತಿದ್ರೆ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ದೇಶದ ಜನ ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸುತ್ತಾರೆಂದು ಕಿಡಿಕಾರಿದರು.

ಬಿಜೆಪಿ.ಯುವ ಮುಖಂಡ ಡಾ.ಸಿದ್ದಾರ್ಥ ಮಾತನಾಡಿ 31 ವರ್ಷದ ಹಳೆಯ ಕೇಸನ್ನು ಕೆದಕಿ ರಾಜ್ಯ ಕಾಂಗ್ರೆಸ್ ಸರ್ಕಾರ ಹುಬ್ಬಳ್ಳಿಯಲ್ಲಿ ಹಿಂದೂ ಕಾರ್ಯಕರ್ತರನ್ನು ಬಂಧಿಸಿ ಕರೆ ಸೇವಕರಿಗೆ ವಿನಾ ಕಾರಣ ತೊಂದರೆ ಕೊಡುತ್ತಿದೆ. ಅದಕ್ಕಾಗಿ ಜನತೆಯಲ್ಲಿ ಕಾಂಗ್ರೆಸ್ ವಿರುದ್ದ ಜಾಗೃತಿ ಮೂಡಿಸಿ ರಾಮ ಮಂದಿರ ಮಂತ್ರಾಕ್ಷತೆಯ ಜೊತೆಗೆ ಪ್ರತಿಭಟನೆಯನ್ನು ಪ್ರತಿ ಮನೆ ಮನೆಗೆ ತೆಗೆದುಕೊಂಡು ಹೋಗಲಾಗುತ್ತದೆ ಎಂದು ಹೇಳಿದರು.

ಬಿಜೆಪಿ. ಜಿಲ್ಲಾ ಮಾಜಿ ಅಧ್ಯಕ್ಷ ಟಿ.ಜಿ. ನರೇಂದ್ರನಾಥ್, ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಜಿ.ಟಿ.ಸುರೇಶ್‌ಸಿದ್ದಾಪುರ, ರೈತ ಮೋರ್ಚಾ ಅಧ್ಯಕ್ಷ ವೆಂಕಟೇಶ್‌ಯಾದವ್, ನಗರ ಮಂಡಲ ಅಧ್ಯಕ್ಷ ನವೀನ್ ಚಾಲುಕ್ಯ, ಗ್ರಾಮಾಂತರ ಮಂಡಲ ಅಧ್ಯಕ್ಷ ಕಲ್ಲೇಶಯ್ಯ, ಮೊಳಕಾಲ್ಮುರು ಮಂಡಲ ಅಧ್ಯಕ್ಷ ಮಂಜುನಾಥ್, ಹಿರಿಯೂರು ಮಂಡಲ ಅಧ್ಯಕ್ಷ ವಿಶ್ವನಾಥ್, ಹೊಳಲ್ಕೆರೆ ಮಂಡಲ ಅಧ್ಯಕ್ಷ ಸಿದ್ದೇಶ್, ಹೊಸದುರ್ಗ ಮಂಡಲ ಅಧ್ಯಕ್ಷ ಜಗದೀಶ್, ನಾಯಕನಹಟ್ಟಿ ಮಂಡಲ ಅಧ್ಯಕ್ಷ ರಾಮರೆಡ್ಡಿ, ಮಲ್ಲಿಕಾರ್ಜುನ್, ಸಂಪತ್‌ಕುಮಾರ್, ನಂದಿ ನಾಗರಾಜ್, ಶಿವಣ್ಣಾಚಾರ್, ವಕ್ತಾರ ನಾಗರಾಜ್‌ಬೇದ್ರೆ, ಕಾರ್ಯದರ್ಶಿಗಳಾದ ಸಿಂಧು, ಸರಸ್ವತಿ, ರಜಿನಿ, ಕವನ, ಕಾಂಚನ, ವೀಣ, ಶ್ಯಾಮಲ ಶಿವಪ್ರಕಾಶ್, ಬಸಮ್ಮ ಸೇರಿದಂತೆ ನೂರಾರು ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.




## ಫಾಸ್ಟ್ ನ್ಯೂಸ್

### ಲೋಕ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ಬೆಂಬಲಿಸಿ: ರಾಮಪ್ಪ



» **ಹೊಳಲ್ಕೆರೆ**

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ಬೆಂಬಲಿಸಿ ಎಂದು ಕೆ.ಪಿ.ಸಿ.ಸಿ ಪ್ರಧಾನ ಕಾರ್ಯದರ್ಶಿ ಲೋಕಸಭಾ ಚುನಾವಣೆಯ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಯಾದ ಎಂ.ರಾಮಪ್ಪ ಮನವಿ ಮಾಡಿಕೊಂಡರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕಾಂಗ್ರೆಸ್ ಪಕ್ಷ ನುಡಿದಂತೆ ನಡೆಯುವ ಪಕ್ಷ ಈ ಬಾರಿ ಚಿತ್ರದುರ್ಗ ಲೋಕಸಭಾ ಚುನಾವಣೆಯ ಜಿಲ್ಲೆಯ ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಆಶೀರ್ವದಿಸಬೇಕೆಂದು ಮತದಾರರಲ್ಲಿ ವಿನಂತಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜ್ಯದ ಜನತೆಗೆ ಉತ್ತಮವಾದ ಆಡಳಿತವನ್ನು ನೀಡುತ್ತಿದ್ದಾರೆ. ಎಲ್ಲಾ ಮನೆಗಳಿಗೂ ಉಚಿತ ವಿದ್ಯುತ್, ಅನ್ನಭಾಗ್ಯ, ಯುವನಿಧಿ, ಗೃಹಲಕ್ಷ್ಮೀ, ಶಕ್ತಿಯೋಜನೆ 5 ಗ್ಯಾರಂಟಿಗಳನ್ನು ಹಿಡೇರಿಸಿದ್ದಾರೆ. ಅಧಿಕಾರದ ಅವಧಿಯಲ್ಲಿ ಜಿಲ್ಲೆಯ ಅಭಿವೃದ್ಧಿಗೆ ಕೇಂದ್ರ ಸಚಿವ ನಾರಾಯಣಸ್ವಾಮಿ ಅಭಿವೃದ್ಧಿ ಪಡಿಸುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ. ನಾಲ್ಕುವರೆ ವರ್ಷಗಳ ಕಾಲ ಏನು ಕೆಲಸ ಮಾಡಿದ್ದಿರಿ? ಎಂದು ಪ್ರಶ್ನಿಸಿದರು. ಚುನಾವಣೆಯ ಸಮಯದಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಅಭಿವೃದ್ಧಿ ಪಡಿಸುತ್ತೇನೆ ಎಂದು ಹೇಳಿದ್ದ ಅವರು ಕೇಂದ್ರ ಸಚಿವ ನಾರಾಯಣಸ್ವಾಮಿಯವರೆ ಜಿಲ್ಲೆಗೆ ನಿಮ್ಮ ಕೊಡುಗೆ ಏನು? ಎಂದು ವಾಗ್ದಾಳಿ ನಡೆಸಿದರು. ಮುಂಬರು ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಥಳಿಯರಿಗೆ ಟಿಕೆಟ್ ನೀಡಿದರೆ ಹೆಚ್ಚಿನ ಮತಗಳಿಂದ ಗೆಲ್ಲುವುದ ಖಚಿತ ಎಂದು ಭವಿಷ್ಯ ನುಡಿದರು. ಸಾಮಾಜಿಕ ನ್ಯಾಯದ ಅಡಿಯಲ್ಲಿ 5 ಮೀಸಲು ಕ್ಷೇತ್ರವಿದ್ದು ಅದರಲ್ಲಿ ಭೋವಿ ಜನಾಂಗಕ್ಕೆ ಟಿಕೆಟ್ ನೀಡಬೇಕೆಂದು ಹೈಕಮಾಂಡ್‌ಗೆ ಆಗ್ರಹಿಸಿದ್ದಾರೆ. ಹೊರಗಿನಿಂದ ಬಂದವರಿಗೆ ಅಭಿವೃದ್ಧಿ ಮಾಡಲು ಸಾಧ್ಯವಿಲ್ಲ ಎಂದರು. ಸ್ಥಳಿಯರಿಗೆ ಟಿಕೆಟ್ ಕೊಟ್ಟರೆ ಜಿಲ್ಲೆಗೆ ಅಭಿವೃದ್ಧಿ ಮಾಡಲು ಸಾಧ್ಯ. ಸುಮಾರು 25 ವರ್ಷಗಳಿಂದ ಪಕ್ಷವನ್ನು ಸಂಘಟಿಸುತ್ತ ಬಂದಿದ್ದೇನೆ. 8 ವಿಧಾನಸಭಾ ಕ್ಷೇತ್ರದ ಶಾಸಕರು ಒಡನಾಟದಲ್ಲಿದ್ದಾರೆ. ಜಿಲ್ಲೆಯಲ್ಲಿ ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು, ಸದಸ್ಯರುಗಳು, ಪ್ರತಿ ಗ್ರಾಮಗಳಲ್ಲಿ ಸಂಘಟನೆ ಮಾಡಿದ್ದೇನೆ. ಹೈಕಮಾಂಡ್ ಟಿಕೆಟ್ ಕೊಡುವ ನಿರೀಕ್ಷೆಯಲ್ಲಿ ಇದ್ದಾರೆ ಎಂದು ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಉಪಸ್ಥಿತರಾದ ಹೊಳಲ್ಕೆರೆ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷರಾದ ಶಿವಕುಮಾರ್, ಬ್ಯಾಂಕ್ ಸೂರನಾಯಕ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರು ಜಿ.ತಿಪ್ಪೇಸ್ವಾಮಿ, ನಿವೃತ್ತ ಕಾರ್ಯನಿರ್ವಣ ಅಧಿಕಾರಿ ಆಂಜನೇಯ, ಟಿ.ಕಾಟಯ್ಯ ಮಾಜಿ ಗ್ರಾ.ಪಂ. ಅಧ್ಯಕ್ಷರು ಹಾಲಿ ಸದಸ್ಯರು ಎನ್. ದೇವರಹಳ್ಳಿ ಗ್ರಾ.ಪಂ, ಮುದಾಸೀರ್, ರಫೀ, ಸಂದೀಪ್, ಹಾಗೂ ಕಾಂಗ್ರೆಸ್ ಮುಖಂಡರು ಇದ್ದರು.

### 5ಕ್ಕೆ ತಮಟೆ ಚಳವಳಿ, 26ರಿಂದ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ

» **ದಾವಣಗೆರೆ**

ಜಿಲ್ಲೆಯ ಹರಿಹರ ತಾಲ್ಲೂಕಿನ ಭಾನುವಳ್ಳಿ ಮತ್ತು ಕಡ್ಲೆಗೊಂದಿ ಗ್ರಾಮದಲ್ಲಿ ಮಾದಿಗ ಹಾಗೂ ಹಿಂದುಳಿದ ಜನಾಂಗದವರಿಗೆ ವಸತಿ ಯೋಜನೆ ಜಾರಿಗೊಳಿಸಲು ಆಗ್ರಹಿಸಿ ದಲಿತ ಸಂಘರ್ಷ ಸಮಿತಿ (ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ) ನೇತೃತ್ವದಲ್ಲಿ ನಿರ್ವಸತಿಕ ಗ್ರಾಮಗಳ ಗ್ರಾಮಸ್ಥರು ಹರಿಹರದ ತಾಲ್ಲೂಕು ಕಚೇರಿ ಎದುರು ಜನವರಿ 26ರಿಂದ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಆರಂಭಿಸಲಾಗುವುದು ಎಂದು ಉಭಯ ಗ್ರಾಮಸ್ಥರು ಎಚ್ಚರಿಕೆ ನೀಡಿದರು.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಡ್ಲೆಗೊಂದಿ ಗ್ರಾಮದ ಜೈತುನ್ ಬೀ ಹಾಗೂ ಸಾಕಮ್ಮ ಅವರು, ಈ ಎರಡೂ ಗ್ರಾಮಗಳಲ್ಲಿ ನೆಲೆಸಿರುವ ನಿರ್ವಸತಿಕರು ಈಗ ಚಿಕ್ಕ ಗುಡಿಸಲು, ನೆರಿಕೆ ಮನೆಗಳಲ್ಲಿ ಅನಾರೋಗ್ಯಕರ ವಾತಾವರಣದಲ್ಲಿ ಬದುಕು ನಡೆಸುತ್ತಿದ್ದೇವೆ. ಅಡುಗೆ ಮನೆ, ಶೌಚಾಲಯಗಳಿಲ್ಲದೆ ಮಹಿಳೆಯರು, ವಯೋವೃದ್ಧರು, ಮಕ್ಕಳು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಅಳಲು ತೋಡಿಕೊಂಡರು.ಭಾನುವಳ್ಳಿ ಗ್ರಾಮದ ಸರ್ವೆ ನಂ.239/22ರಲ್ಲಿ 2–27 ಎಕರೆ ಎ.ಕೆ. ಸರ್ವೀಸ್ ಇನಾಂ ಜಮೀನಿನಲ್ಲಿ ನಿರ್ವಸತಿ ಕುಟುಂಬಗಳಿಗೆ ವಸತಿ ಸೌಲಭ್ಯ ಒದಗಿಸಲು ಆಗ್ರಹಿಸಿ ಕದಸಂಸ ತಾಲ್ಲೂಕು ಸಂಚಾಲಕ ಪಿ.ಜೆ. ಮಹಾಂತೇಶ್ ಇವರ ನೇತೃತ್ವದಲ್ಲಿ ಕಳೆದ ಜೂನ್ ತಿಂಗಳಲ್ಲಿ ಭಾನುವಳ್ಳಿಯಿಂದ ಹರಿಹರದವರೆಗೆ ಪಾದಯಾತ್ರೆ ಮಾಡಿ ತಾಲ್ಲೂಕು ಆಡಳಿತಕ್ಕೆ ಮನವಿ ನೀಡಲಾಗಿತ್ತು. ಆಗಿನ ತಹಶೀಲ್ದಾರರು 1 ತಿಂಗಳಲ್ಲಿ ಸಮಸ್ಯೆ ಪರಿಹರಿಸುವುದಾಗಿ ನೀಡಿದ ಭರವಸೆ ಈವರೆಗೂ ಈಡೇರಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.ಇದೆ ರೀತಿ ತಾಲ್ಲೂಕಿನ ಕಡ್ಲೆಗೊಂದಿ ಗ್ರಾಮದಲ್ಲಿ ಮಾದಿಗ ಹಾಗೂ ಹಿಂದುಳಿದ ಸಮುದಾಯದ 120ಕ್ಕೂ ಹೆಚ್ಚು ಕುಟುಂಬಗಳು ಲಭ್ಯವಿರುವ ಕೇವಲ 30 ಚಿಕ್ಕ ಗುಡಿಸಲು, ನೆರಿಕೆ ಮನೆಗಳಲ್ಲಿ ಅನಾಗರಿಕ ವಾತಾವರಣದಲ್ಲಿ ಬದುಕುತ್ತಿದ್ದಾರೆ.

# ಪದವಿ, ಡಿಪ್ಲೊಮಾ ಉತ್ತೀರ್ಣರಾದವರಿಗೆ 5ನೇ ಗ್ಯಾರಂಟಿ ಯುವನಿಧಿ: ಜಿಲ್ಲಾಧಿಕಾರಿ

**ಜನವರಿ 12 ರಂದು ಶಿವಮೊಗ್ಗದಲ್ಲಿ ಚಾಲನೆ, ದಾವಣಗೆರೆ ಜಿಲ್ಲೆಯಲ್ಲಿ ಯುವನಿಧಿ ನೊಂದಣಿ ಅಭಿಯಾನ**

» **ದಾವಣಗೆರೆ**

ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲೊಂದಾದ ಯುವನಿಧಿ ಯೋಜನೆಗೆ ಜನವರಿ 12 ರಂದು ಶಿವಮೊಗ್ಗದಲ್ಲಿ ಚಾಲನೆಗೊಳ್ಳಲಿದ್ದು ದಾವಣಗೆರೆ ಜಿಲ್ಲೆಯಲ್ಲಿ ಯುವನಿಧಿ ನೊಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರು ಮತ್ತು ಕಾಲೇಜು ಪ್ರಾಂಶುಪಾಲರೊಂದಿಗೆ ನಡೆಸಿದ ವಿಡಿಯೋ ಕಾನ್ಫರೆನ್ಸ್ ನಲ್ಲಿ ಮಾತನಾಡಿದರು. ಇತ್ತೀಚಿನ 6 ತಿಂಗಳಗಿಂತ ಮೊದಲು ಪದವಿ ಉತ್ತೀರ್ಣ, ಡಿಪ್ಲೊಮಾ ಉತ್ತೀರ್ಣರಾದ ಯುವ ಪದವೀಧರರಿಗೆ ಮಾಸಿಕ 3 ಸಾವಿರ ಮತ್ತು ಡಿಪ್ಲೊಮಾ ಪಡೆದವರಿಗೆ ಮಾಸಿಕ 1500 ರೂ. ಗಳ ಯುವ ನಿಧಿಯನ್ನು ನೀಡಲಾಗುತ್ತಿದೆ. ಈ ಯೋಜನೆಗೆ ಈಗಾಗಲೇ ನೊಂದಣಿ ಆರಂಭವಾಗಿದೆ. ಈವರೆಗೆ ಜಿಲ್ಲೆಯಲ್ಲಿ 500 ಜನರಿಗಿಂತ ಹೆಚ್ಚು ನೊಂದಣಿಯಾಗಿದ್ದು ಬರುವ ಜನವರಿ 12 ರೊಳಗಾಗಿ 10 ಸಾವಿರ ಪದವಿ, ಡಿಪ್ಲೊಮಾ ಪಡೆದ ಯುವ ಜನರನ್ನು ನೊಂದಣಿ ಮಾಡಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡುವ ದಿನ ಡಿಬಿಟಿ ಮೂಲಕ ಯೋಜನೆಯ ಲಾಭ ಕಲ್ಪಿಸಲು ನೊಂದಣಿಗೆ ಅಭಿಯಾನ ಮಾಡಲಾಗುತ್ತಿದೆ.

ಯುವನಿಧಿ ನೊಂದಣಿಯನ್ನು ಗ್ರಾಮಾ ಒನ್, ಕರ್ನಾಟಕ ಒನ್ ಮತ್ತು ಸೇವಾಸಿಂಧೂ ಪೋರ್ಟಲ್‌ನಲ್ಲಿನೊಂದಣಿಮಾಡಬಹುದಾಗಿದೆ. ಆದರೂ ಸಹ ಅಭಿಯಾನದ ಮೂಲಕ ಹೆಚ್ಚು ಜನರ ನೊಂದಣಿ ಮಾಡಲು ಹಾಗೂ ಯಾರು ಸಹ ಈ ಯೋಜನೆಯಿಂದ ಹೊರಗುಳಿಯಬಾರದೆಂದು ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ ಕಚೇರಿ, ತಾಲ್ಲೂಕು ಪಂಚಾಯಿತಿಯಲ್ಲಿ ನೊಂದಣಿ ಅಭಿಯಾನವನ್ನು ಹೆಚ್ಚುವರಿಯಾಗಿ ಮಾಡಲಾಗುತ್ತದೆ. ಮತ್ತು ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ನಿವಾರಣೆಗಾಗಿ ದಾವಣಗೆರೆ ಪಾಲಿಕೆ ನಿಯಂತ್ರಣ ಕೊಠಡಿಯಲ್ಲಿ ಕಾಲ್ ಸೆಂಟರ್ ತೆರೆಯಲಾಗುತ್ತದೆ. ಮತ್ತು ಎಲ್ಲಾ ತಾಲ್ಲೂಕುಗಳಲ್ಲಿನ ತಾಲ್ಲೂಕು ಕಚೇರಿಯಲ್ಲಿ ಕಾಲ್ ಸೆಂಟರ್ ತಾತ್ಕಾಲಿಕವಾಗಿ ತೆರೆಯಲು ತಹಶೀಲ್ದಾರರಿಗೆ ಸೂಚನೆ ನೀಡಿದರು.



ನೋಡಲ್ ಅಧಿಕಾರಿಗಳ ನೇಮಕ; ಯುವನಿಧಿ ಯೋಜನೆಗೆ ನೊಂದಣಿ ಮಾಡಿಸಲು ಎಲ್ಲಾ ತಾಲ್ಲೂಕಗಳಿಗೆ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡುತ್ತಿದ್ದು ಎಲ್ಲಾ ಕಾಲೇಜುಗಳಲ್ಲಿಯು ಅಭಿಯಾನ ಮಾಡುವ ಮೂಲಕ ಯುವಕರಿಗೆ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತದೆ. ಮತ್ತು ದಾವಣಗೆರೆ ವಿ.ವಿ. ಉತ್ತೀರ್ಣರಾದ ಅಂತಿಮ ಪದವಿ ವಿದ್ಯಾರ್ಥಿಗಳ ವಿವರವನ್ನು ನ್ಯಾಡ್‌ಗೆ ಅಪ್‌ಲೋಡ್ ಮಾಡಲು ಸೂಚನೆ ನೀಡಿದರು.

ಶಿವಮೊಗ್ಗಕ್ಕೆ 10 ಸಾವಿರ ಯುವನಿಧಿ ಫಲಾನುಭವಿಗಳು; ಯುವನಿಧಿ ಯೋಜನೆಗೆ ಜನವರಿ 12 ರಂದು ಶಿವಮೊಗ್ಗದಲ್ಲಿ ನಡೆಯುವ ಕಾರ್ಯಕ್ರಮದಲ್ಲಿಮುಖ್ಯಮಂತ್ರಿಯವರು ಚಾಲನೆ ನೀಡುವ ಮೂಲಕ ನೊಂದಣಿಯಾದವರಿಗೆ ನೇರವಾಗಿ ಡಿಬಿಟಿ ಮೂಲಕ ಮಾಸಿಕ ಶಿಷ್ಯವೇತನಕ್ಕೆ ಚಾಲನೆ ನೀಡಲಿದ್ದು ದಾವಣಗೆರೆ ಜಿಲ್ಲೆಯಿಂದ 10 ಸಾವಿರಕ್ಕಿಂತ ಹೆಚ್ಚು ವಿದ್ಯಾರ್ಥಿಗಳನ್ನು ಭಾಗವಹಿಸಲು ಕಳುಹಿಸಿಕೊಡಲಾಗುತ್ತದೆ. ಇದಕ್ಕಾಗಿ ಎಲ್ಲಾ ತಾಲ್ಲೂಕುಗಳಿಂದ ಕರೆದುಕೊಂಡು ಹೋಗಿ ಬರಲು ವಾಹನದ ವ್ಯವಸ್ಥೆ ಮಾಡಲಾಗುತ್ತದೆ ಎಂದರು.

ಅರ್ಜಿ ಹಾಕುವ ವಿಧಾನ; ಸೇವಾಸಿಂಧೂ ಪೋರ್ಟಲ್‌ಗೆ ಹೋಗಿ ಮೆನುನಲ್ಲಿ ಕ್ಲಿಕ್ ಅಪ್ಲಿಕೇಷನ್ ಸರ್ವೀಸಸ್, ಎಲ್ಲಾ ಸೇವೆಗಳು ತೆರದುಕೊಳ್ಳುತ್ತವೆ, ಇಲ್ಲಿ ಯುವನಿಧಿ ಅರ್ಜಿ ಕ್ಲಿಕ್ ಮಾಡಬೇಕು, ನಂತರ ಅರ್ಜಿ ಪುಟ ತೆರದುಕೊಳ್ಳುತ್ತದೆ. ಇಲ್ಲಿ ವಿದ್ಯಾರ್ಥಿಯ ಸ್ವಯಂ ಘೋಷಣೆ ಯಸ್ ಅಥವಾ ನೋ ಇದರಲ್ಲಿ 6 ಅರ್ಹತೆಗಳನ್ನು ಹೊಂದಿರಬೇಕು. ನಂತರ ಆಧಾರ್ ದೃಢೀಕರಣ ಮಾಡಬೇಕು, ಆಧಾರ್ ಮಾಹಿತಿ ಬಾಕ್ಸ್ ಚೆಕ್ ಮಾಡಿ, ನಂತರ ಓಟಿಪಿ ಜನರೇಟ್ ಮಾಡಬೇಕು, ನಂತರ ಮೊಬೈಲ್‌ಗೆ ಓಟಿಪಿ ಬರುತ್ತದೆ. ನಂತರ ಎಲ್ಲಾ ವಿವರ ಅರ್ಜಿಗೆ ಆಧಾರ್‌ನಂತೆ ತೆರೆದುಕೊಳ್ಳಲಿದ್ದು ಸಬ್‌ಮಿಟ್ ಮಾಡಬೇಕು, ವಿಳಾಸ ಸರಿಯಿದ್ದಲ್ಲಿ ಯಥಾವತ್ತು, ಇಲ್ಲದಿದ್ದಲ್ಲಿ ಅರ್ಜಿದಾರರ ತಾಲ್ಲೂಕು, ಜಿಲ್ಲೆ ಟೈಪ್ ಮಾಡಬೇಕು, ನಂತರ ನಾಡ್‌ನಲ್ಲಿ ಪದವಿ ಶಿಕ್ಷಣದ ಪ್ರಮಾಣ ಪತ್ರದ ಸಂಖ್ಯೆ ಟೈಪ್ ಮಾಡಿದಲ್ಲಿ ವಿವರ ಸ್ವಯಂಪ್ರೇರಿತವಾಗಿ ತೆರದುಕೊಳ್ಳುತ್ತದೆ. ಶಿಕ್ಷಣದ ವಿವರ ದಾಖಲು ಮಾಡಬೇಕು ಇದು ಅರ್ಜಿ ನೊಂದಣಿಯ ವಿವಿಧ ಹಂತಗಳಾಗಿರುತ್ತವೆ.

## ಗಣಿತ ಕಲಿಕಾ ಅಂದೋಲನ



» **ಪರಶುರಾಂಪುರ**

ಗಣಿತ ಕಲಿಕಾ ಅಂದೋಲನ ಸ್ಪರ್ಧೆಗಳಿಂದ ವಿದ್ಯಾರ್ಥಿಗಳಿಂದ ಕಲಿಕಾ ಉತ್ಸಾಹ ಹೆಚ್ಚಳವಾಗಿ ವಿದ್ಯಾರ್ಥಿಗಳ ಬೌದ್ದಿಕ ಮಟ್ಟ ವೃದ್ಧಿಯಾಗಲು ನೆರವಾಗುತ್ತದೆ ಎಂದು ಗ್ರಾಪಂ ಪಿಡಿಓ ಈಶ್ವರಪ್ಪ ತಿಳಿಸಿದರು.

ಸಮೀಪದ ಕಡೇವುಡೆ ಗ್ರಾಮದಲ್ಲಿ ಬುಧವಾರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಕೆ , ಎಂಡಿ ಪುರ ಗ್ರಾಪಂ , ಶಿಕ್ಷಣ ಇಲಾಕೆಯ ಸಹಯೋದಲ್ಲಿ ಆಯೋಜಿದ್ದ ಗಣಿತ ಕಲಿಕಾ ಆಂದೋಲನ ಮತ್ತು ಮಾತೆ ಸಾವಿತ್ರಿಬಾಯಿ ಪುಲೆ ಅವರ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಗಣಿತ ಎಂದರೆ ಕಬ್ಬಿಣದ ಕಡಲೆ ಎನ್ನುವ ಅಭಿಪ್ರಾಯ ಸಾಮಾನ್ಯವಾಗಿದೆ. ತರಗತಿಗಳಲ್ಲಿ ಗಣಿತ ವಿಷಯವನ್ನ ಪರಿಣಾಮಕಾರಿಯಾಗಿ ಮತ್ತು ಸರಳವಾಗಿ ಬೋಧಿಸುವ ಕುರಿತು ಶಿಕ್ಷಕರಿಂದ ನಿರಂತರ ಪ್ರಯತ್ನಗಳು ನಡೆಯಬೇಕೆಂದರು.ಪ್ರಾ.ಶಾ.ಶಿಕ್ಷಕರ ಸಂಘದ ತಾಲೂಕದ್ಯಕ್ಷ ಮಹಾಲಿಂಗಪ್ಪ ಮಾತನಾಡಿ , ತಾಲೂಕು ಮಟ್ಟದಲ್ಲಿ ಕ.ರಾ.ಶಾ.ಶಿಕ್ಷಕರ ಸಂಘ ಹಾಗೂ ಪ್ರಗತಿಪರ ಶಿಕ್ಷಕರ ವೇದಿಕೆಯಿಂದ ಮಾತೆ ಸಾವಿತ್ರಿಬಾಯಿ ಪುಲೆ ಅವರ ಜಯಂತಿ ಕರ್ಯಕ್ರಮವನ್ನ ಜ.19 ರಂದು ಚಳ್ಳಕೆರೆಯ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ಸಚಿವರ , ಶಾಸಕರ ಮತ್ತು ಅಧಿಕಾರಿಗಳ ನೇತೃತ್ವದಲ್ಲಿ ಆಚರಣೆ ಮಾಡಲಾಗುವುದು ಎಂದು ತಿಳಿಸಿದರು.

ಸಿಆರ್‌ಪಿ ನೀಲಕಂಠಪ್ಪ ಪ್ರಾಸ್ಥವಿಕವಾಗಿ ಮಾತನಾಡಿ , ಮಕ್ಕಳಲ್ಲಿ ಗಣಿತ ವಿಷಯದ ಬಗ್ಗೆ ಇರುವ ಭಯವನ್ನ ಹೋಗಲಡಿಸಲು ಸರ್ಕಾರ ,ಸ್ಥಳೀಯ ಅಡಳಿತ , ಸರ್ಕಾರೇತರ ಸಂಘ–ಸಂಸ್ಥೆಗಳು ಜಂಟಿಯಾಗಿ ಗಣಿತ ಕಲಿಕಾ ಆಂದೋಲನ ಎಂಬ ವಿಶಿಷ್ಠ ಕಾರ್ಯಕ್ರಮವನ್ನ ರೂಪಿಸಿದೆ.ಅ ಮೂಲಕ ವಿದ್ಯಾರ್ಥಿಗಳು ಗಣಿತ ವಿಷಯವನ್ನ ಪರಿಣಮಕಾರಿಯಾಗಿ ಕಲಿಯಲು ಪ್ರೇರೇಪಿಸಲಾಗುತ್ತಿದೆ ಎಂದರು.

ಈ ವೇಳೆಯಲ್ಲಿ ಗಣಿತ ಕಲಿಕಾ ಅಂದೋಲನದಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗಳಿಗೆ ಗಣ್ಯರು ,ಅತಿಥಿಗಳು ಪ್ರಮಾಣ ಪತ್ರಗಳನ್ನ ನೀಡುವುದರ ಮೂಲಕ ಕಲಿಕೆಗೆ ಪ್ರೋತ್ಸಾಹಿಸಿದರು.

ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷೆ ಕವಿತಾ ,ಗ್ರಾಪಂ ಸದಸ್ಯರಾದ ಮಮತ , ಶಿವಣ್ಣ , ಗೀತಮ್ಮ , ರಾಜೇಶ್ , ಗಣಿತ ವಿಷಯದ ಸಂಪನ್ಮೂಲ ಶಿಕ್ಷಕ ವೀರಣ್ಣ ,ಎಡಿಎಂಸಿ ಅಧ್ಯಕ್ಷ ನಾಗರಾಜು ,ಸಿಆರ್‌ಪಿ ರಘು ಶಿಕ್ಷಕರಾದ ಬಸವರಾಜು , ಮಲ್ಲಿಕಾರ್ಜುನ , ರಾಮಕೃಷ್ಣಪ್ಪ , ಉಷಾದೇವಿ , ಮಹಲಿಂಗಪ್ಪ , ವಿರುಪಾಕ್ಷಪ್ಪ , ಆಶಾ , ಮಹೇಶ್ , ಸೇರಿದಂತೆ ಮಹದೇವಪುರ ಕ್ಲಸ್ಟರ್ ವ್ಯಾಪ್ತಿಯ ವಿವಿಧ ಶಾಲೆಗಳ ಶಿಕ್ಷಕರು , ವಿದ್ಯಾರ್ಥಿಗಳು ಮತ್ತು ಗ್ರಾಮಸ್ಥರಿದ್ದರು.

## ಪ್ರಮುಖ ಸುದ್ದಿ

**ಸಮಾಜದಲ್ಲಿ ಸಮಾನತೆ ಉಂಟು ಮಾಡಿದ ಮೊದಲ ಶಿಕ್ಷಕಿ ಸಾವಿತ್ರಿಬಾಯಿ ಪುಲೆ**

# ಪುಲೆ ಆದರ್ಶ ಎಲ್ಲಾ ಮಹಿಳೆಯರು ಅಳವಡಿಸಿಕೊಳ್ಳಿ

» **ಚಳ್ಳಕೆರೆ**

ಪುರುಷ ಸಮಾಜದ ದಾಸ್ಯದ ಮಧ್ಯೆಯೂ ಒಂದು ಹೆಣ್ಣು ಶಿಕ್ಷಣ ಕಲಿತು, ಸಮಾಜದಲ್ಲಿ ಪುರುಷರಷ್ಟೇ ನಾನು ಸಮಾನಳು ಎಂದು ತೋರಿಸಿದ ಧಿಟ್ಟ, ಧೀರೆ ಮಹಿಳೆ ಸಾವಿತ್ರಿಬಾಯಿಪುಲೆಯವರು ಎಂದು ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಎಂ.ರವೀಶ್ ತಿಳಿಸಿದರು.

ಅವರು, ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸಾವಿತ್ರಿಬಾಯಿಪುಲೆಯವರ 193ನೇ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಭಾರತದ ಮೊದಲ ಮಹಿಳಾ ಶಿಕ್ಷಕಿ ಎಂದು ಕರೆಸಿಕೊಳ್ಳುವ ಸಾವಿತ್ರಿಬಾಯಿಪುಲೆಯವರು ಇಂದಿನ ಎಲ್ಲಾ ಮಹಿಳೆಯರಿಗೂ ಸ್ಪೂರ್ತಿ. ಹೆಣ್ಣೊಂದು ಕಲಿತರೆ, ಶಾಲೆಯೊಂದು ತೆರೆದಂತೆ ಎಂಬ ನಾಲ್ನಡಿಯಂತೆ ತಮ್ಮ ಪತಿಯಿಂದಲೇ ಶಿಕ್ಷಣ ಕಲಿತು ಸಮಾಜಕ್ಕೆ ಮಾದರಿಯಾದರು. ನನ್ನಂತೆ ಎಲ್ಲಾ ಮಹಿಳೆಯರು ಶಿಕ್ಷಣ ಕಲಿಯಬೇಕು ಎಂಬ ಉದ್ದೇಶದಿಂದ ಹಲವು ವರ್ಷಗಳ ಕಾಲ ಮಹಾರಾಷ್ಟ್ರದ ಶಾಲೆಯೊಂದರಲ್ಲಿ ಶಿಕ್ಷಕಿಯಾಗಿ ಮಕ್ಕಳಿಗೆ ಬೋಧನೆ ಮಾಡುವ ಮೂಲಕ ದೇಶದ ಮೊದಲ ಮಹಿಳಾ ಶಿಕ್ಷಕಿ ಎಂಬ ಹೆಗ್ಗಳಿಕೆಗೆ ಪಾತ್ರರಾದರು ಎಂದರು.



ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ ಮಾತನಾಡಿ, ಭಾರತದ ಶಿಕ್ಷಣ ಕಲಿತ ಮೊದಲ ಮಹಿಳೆ ಸಾವಿತ್ರಿಬಾಯಿಪುಲೆ ಹಲವಾರು ಸಾಮಾಜಿಕ ಕಟ್ಟುಪಾಡುಗಳನ್ನು ದೂರ ಮಾಡಿದರು. ಬ್ರಾಹ್ಮಿಯ ಪದ್ದತಿಯ ವಿವಾಹವನ್ನು ಕಾನೂನು ಬದ್ದವಾಗಿ ಪರಿವರ್ತಿಸುವಲ್ಲಿ ಇವರ ಪಾತ್ರ ಹೆಚ್ಚಿದೆ. ಶಿಕ್ಷಕಿ, ಶ್ರೇಣೀಕೃತ ಸಮಾಜದಲ್ಲಿ ಅಡಗಿದ್ದ ಹಲವಾರು ಅನಿಷ್ಠ ಪದ್ದತಿಗಳನ್ನು ದೂರಮಾಡಿದರು. ಅಂಧಾನುಕರಣೆ, ಕಂದಾಚಾರ, ಶೋಷಣೆ, ಅಸಮಾನತೆ, ಮೌಢ್ಯತೆಯಿಂದ ಜಡ್ಡುಗಟ್ಟಿದ್ದ ಗೊಡ್ಡು ಸಂಪ್ರದಾಯಗಳಿಗೆ ತಿಲಾಂಜಲಿ ಹೇಳಿದ ಧೀರ ಮಹಿಳೆಯಾಗಿ ಹೊರಹೊಮ್ಮಿದರು. ಇದರ ಫಲವಾಗಿ ಅಂದಿನ ಬ್ರಿಟೀಷ್ ಸರ್ಕಾರ ಇವರಿಗೆ ಉತ್ತಮ ಶಿಕ್ಷಕಿ ಎಂದು ಸನ್ಮಾನಿಸಿದ್ದನ್ನು ಸ್ಮರಿಸಿದರು. ದಮನಿತ ಮಹಿಳೆಯರು, ಬಹಿಷ್ಕೃತರು, ಅನಾಥರು, ಅಸ್ಪೃಶ್ಯರಿಗೆ ದಿಟ್ಟತನದಿಂದಲೇ ಶಿಕ್ಷಣ ನೀಡುವ ಮೂಲಕ ಅವರೂ ಸಮಾಜದಲ್ಲಿ ಸಮಾನತೆಯಿಂದ ಬದುಕುವ ಹಕ್ಕಿದೆ ದಿಕ್ಕುತೋರಿದ ಧೀರೋದ್ದಾತ ಸಮಾಜ ಸುಧಾರಕಿಯಾಗಿ ಜನಮಾನಸದಲ್ಲಿ ಉಳಿದಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಜಿ.ಟಿ.ಪುಷ್ಪಲತಾ, ಹಬೀಬುಲ್ಲಾ, ನಾಗರಾಜಬೆಳಗಟ್ಟ, ರೇಖಾ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಇಂಡಿಯಾ ಸ್ಕಿಲ್ ಕರ್ನಾಟಕ ಸ್ಪರ್ಧೆಗೆ ಅರ್ಜಿ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ರಾಜ್ಯ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದಿಂದ ಆಯೋಜಿಸಿರುವ ಇಂಡಿಯಾ ಸ್ಕಿಲ್ ಕರ್ನಾಟಕ ಸ್ಪರ್ಧೆಯಲ್ಲಿ ಭಾಗವಹಿಸಲು ಆಸಕ್ತ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಒಟ್ಟು 57 ವಿವಿಧ ಕೌಶಲ್ಯಾ. ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ. ಭಾಗವಹಿಸುವರು ವೆಬ್ ಸೈಟ್ https://wwwskillindiadigital.gov.in/home ನಲ್ಲಿ ನೊಂದಾಣಿ ಮಾಡಿಕೊಳ್ಳಬಹುದಾಗಿದೆ. ಅರ್ಜಿ ಸಲ್ಲಿಸಲು ಜ.7 ಕೊನೆಯ ದಿನವಾಗಿರುತ್ತದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಜಂಟಿ ನಿರ್ದೇಶಕರಾದ ಬಸನಗೌಡ ತಿಳಿಸಿದ್ದಾರೆ.

### ಯುವ ಪರಿವರ್ತಕರ, ಯುವ ಸಮಾಲೋಚಕರ ತರಬೇತಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಜನ ಆರೋಗ್ಯ ಸಂಸ್ಥೆ, ಎಪಿಡೀಮಿಯಾಲಜಿ ವಿಭಾಗ, ನಿಮ್ಹಾನ್ಸ್, ಇವರಿಂದ ಹಾಗೂ ರಾಜ್ಯ ಸರ್ಕಾರದ ಅನುದಾನಿತ ಯೋಜನೆಯಾದ ಯುವ ಜನರ ಮಾನಸಿಕ ಆರೋಗ್ಯಕ್ಕೆ ಪೂರಕ ಯುವ ಸ್ಪಂದನ ಸೇವೆಗಳ ಸಮಗ್ರ ಅಭಿವೃದ್ಧಿ ಮತ್ತು ಅನುಷ್ಠಾನ ಯೋಜನೆ ಯುವ ಸ್ಪಂದನ ಅಡಿಯಲ್ಲಿರುವ ಯುವ ಪರಿವರ್ತಕರ ಹಾಗೂ ಯುವ ಸಮಾಲೋಚಕರ ತರಬೇತಿಗಾಗಿ ಯುವತಿ,ಯುವಕರಿಂದ ಅರ್ಜಿ ಯನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಯು 21 ರಿಂದ 35 ವರ್ಷದೊಳಗಿನ ವಯೋಮಾನದವರಾಗಿರಬೇಕು. ಪದವಿ ಹಾಗೂ ಮೇಲ್ಪಟ್ಟು ಪದವಿ ತೇರ್ಗಡೆ ಹೊಂದಿದವರು ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ತಮ್ಮ ಭಾವಚಿತ್ರದ ಸ್ವ ವಿವರೊಂದಿಗೆ ಸಹಾಯಕ ನಿರ್ದೇಶಕರ ಕಛೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದಾವಣಗೆರೆ ಕಛೇರಿಗೆ ಜ.12 ರೊಳಗಾಗಿ ಸಲ್ಲಿಸಬೇಕು ಹೆಚ್ಚಿನ ವಿವರಗಳಿಗೆ ದೂ ಸಂ: 9008343253, 08192-237480ನ್ನು ಸಂಪರ್ಕಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಜಯಲಕ್ಷ್ಮೀ ಬಾಯಿ ತಿಳಿಸಿದ್ದಾರೆ.

### ಮರಣ ಪ್ರಮಾಣ ಪತ್ರಕ್ಕಾಗಿ ಫೋರ್ಜರಿ ಸಹಿ; ಕ್ರಮಕ್ಕೆ ಒತ್ತಾಯ

» **ದಾವಣಗೆರೆ**

ಹೊನ್ನಾಳಿ ತಾಲೂಕಿನ ಯಕ್ಕನಹಳ್ಳಿ ಗ್ರಾಮದಲ್ಲಿ ಮರಣ ಹೊಂದಿದ ನಮ್ಮ ತಾಯಿ ಕರಿಬಸಮ್ಮರ ಮರಣ ಪ್ರಮಾಣ ಪತ್ರವನ್ನು ಫೋರ್ಜರಿ ಸಹಿ ಮಾಡಿ ಗ್ರಾಮದ ಹನುಮಂತಪ್ಪ ಎಂಬುವವರು ಪಡೆದುಕೊಂಡಿದ್ದಾರೆ ಎಂದು ಯಕ್ಕನಹಳ್ಳಿ ಗ್ರಾಮದ ಬಿ.ಪ್ರಕಾಶ್ ಆರೋಪಿಸಿದ್ದಾರೆ.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನನ್ನತಾಯಿ ಕರಿಬಸಮ್ಮ ಅವರು ಜೂ.29ರ 2014ರಂದು ಮರಣ ಹೊಂದಿದ್ದು, ಅವರ ಮರಣ ಪ್ರಮಾಣ ಪತ್ರವನ್ನು ಜುಲೈ 23ರ 2014ರಂದು ಪಡೆದುಕೊಂಡಿದ್ದೇವೆ. ಆದರೆ 2023ರ ಏಪ್ರಿಲ್ 4ರಂದು ಗ್ರಾಮದ ಹನುಮಂತಪ್ಪ ಎಂಬುವವರು ನನ್ನ ತಾಯಿಯವರ ಮರಣ ಪತ್ರ ಪಡೆಯಲು ಹೋಗಿದ್ದ ವೇಳೆ ಹೊನ್ನಾಳಿ ತಾಲ್ಲೂಕಿನ ತಹಶೀಲ್ದಾರರ ಕಚೇರಿಯಲ್ಲಿ ಅಲಭ್ಯ ಪ್ರಮಾಣ ಪತ್ರ ನೀಡಲಾಗಿದೆ ಎಂದು ತಿಳಿಸಿದರು. ಅಧಿಕಾರಿಗಳು ಒಮ್ಮೆ ಮರಣ ಪ್ರಮಾಣ ಪತ್ರ ನೀಡುತ್ತಾರೆ ಮತ್ತೊಮ್ಮೆ ಅಲಭ್ಯ ಪ್ರಮಾಣ ಪತ್ರ ನೀಡಿತ್ತಾರೆ ಇದು ಸರಿಯಾದ ಕ್ರಮವಲ್ಲ. ನಮ್ಮ ವಂಶವೃಕ್ಷ ಪಡೆಯಲು ಹನುಮಂತಪ್ಪ ಅವರು ನನ್ನ ಸಹೋದರ ಪಾಲಾಕ್ಷಪ್ಪ ಹೆಸರಿನಲ್ಲಿ ಸಹಿ ಫೋರ್ಜರಿ ಮಾಡಿ ಅರ್ಜಿ ಸಲ್ಲಿಸಿದ್ದಾರೆ. ಈ ಬಗ್ಗೆ ತಹಶೀಲ್ದಾರ್ ಹಾಗೂ ಜಿಲ್ಲಾಧಿಕಾರಿಗಳಿಗೆ ದೂರು ನೀಡಿದ್ದೇನೆ. ಆದರೆ ಇಲ್ಲಿಯವರೆಗೂ ಯಾವುದೇ ಪ್ರತ್ಯುತ್ತರ ಬಂದಿಲ್ಲ. ಆದ್ದರಿಂದ ಈ ಬಗ್ಗೆ ಸೂಕ್ತ ತನಿಖೆ ನಡೆಸಬೇಕು ಇಲ್ಲವಾದಲ್ಲಿ ಲೋಕಾಯುಕ್ತಕ್ಕೆ ದೂರು ನೀಡಲಾಗುವುದು ಎಂದರು.

### ರಿಯಾಯಿತಿ ಬಸ್ ಪಾಸ್‌ಗಳ ನವೀಕರಣ

» **ಬಳ್ಳಾರಿ**

2024ನೇ ಸಾಲಿಗಾಗಿ ಜ.01 ರಿಂದ ಡಿ.31 ರವರೆಗೆ ವಿಕಲಚೇತನರ ರಿಯಾಯಿತಿ ಬಸ್ ಪಾಸ್‌ಗಳನ್ನು ಮಾನ್ಯತೆ ಇರುವಂತೆ ಫಲಾನುಭವಿಗಳು ನವೀಕರಣ ಮಾಡಿಕೊಳ್ಳಬೇಕು ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬಳ್ಳಾರಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಬಾಗ್‌ಬಾನ್ ಅವರು ತಿಳಿಸಿದ್ದಾರೆ.ವಿಕಲಚೇತನರ ರಿಯಾಯಿತಿ ಬಸ್ ಪಾಸ್‌ಗಳನ್ನು ನವೀಕರಣ ಮಾಡಿಕೊಳ್ಳಲು ಸಾಕಷ್ಟು ಕಾಲಮಿತಿ ನೀಡುವ ಉದ್ದೇಶದಿಂದ 2023 ನೇ ಸಾಲಿನಲ್ಲಿ ವಿತರಿಸಲಾಗಿರುವ ಅಂದರೆ 2023ರ ಡಿ.31ರ ವರೆಗೆ ಮಾನ್ಯತೆ ಇರುವ ವಿಕಲಚೇತನರ ಪಾಸ್‌ಗಳನ್ನು ನವೀಕರಿಸದೇ 2024ರ ಫೆ.29ರ ವರೆಗೆ ಮಾನ್ಯತೆ ನೀಡಲಾಗಿದ್ದು, ಆ ದಿನಾಂಕದವರೆಗೆ ವಿಕಲಚೇತನರು ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸಲು ಅವಕಾಶ ನೀಡಲಾಗಿದೆ.

**ಅರ್ಹರು ಮುಂಜಾಗ್ರತಾ ಲಸಿಕೆ ಪಡೆಯಿರಿ -ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ**

# ಜೆಎನ್-1ಸೋಂಕು ಆತಂಕಬೇಡ, ಜಾಗ್ರತೆ ಇರಲಿ

■ **ಜನಾಶಯಪ್ರಭ ಚಿತ್ರದುರ್ಗ**

ಕೋವಿಡ್ ಜೆಎನ್-1 ಸೋಂಕು ಆತಂಕ ಬೇಡ, ಮುಂಜಾಗ್ರತೆ ಇರಲಿ. ಅರ್ಹರು ಮುಂಜಾಗ್ರತಾ ಲಸಿಕೆ ಪಡೆಯಿರಿ ಎಂದು ಜಿಲ್ಲಾಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಹೇಳಿದರು.

ಇಲ್ಲಿನ ಜಿಲ್ಲಾಸ್ಪತ್ರೆಯ ಕೊಠಡಿ ಸಂಖ್ಯೆ-23ರ ಲಸಿಕಾ ವಿಭಾಗದಲ್ಲಿ ಬುಧವಾರ ಕೋವಿಡ್-19 ಮುನ್ನೆಚ್ಚರಿಕಾ ಡೋಸ್ ಕಾರ್ಬಿವ್ಯಾಕ್ಸ್ ಲಸಿಕಾ ಅಧಿವೇಶನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಜಿಲ್ಲಾ ಆಸ್ಪತ್ರೆಯ ಕೊಠಡಿ ಸಂಖ್ಯೆ-23ರಲ್ಲಿ ಕಾರ್ಬಿವ್ಯಾಕ್ಸ್ ಲಸಿಕಾ ವ್ಯವಸ್ಥೆ ಕಲ್ಪಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ತಾಲ್ಲೂಕು ಅರೋಗ್ಯ ಅಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ಮೊದಲ ಹಂತದಲ್ಲಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ, ಆರೋಗ್ಯ ಇಲಾಖೆಯ ಸೇವಾ ನೌಕರರಿಗೆ, ಸಹವರ್ತಿ ಕಾಯಿಲೆಗಳನ್ನು ಹೊಂದಿರುವವರಿಗೆ ಈಗಾಗಲೇ ಬೂಸ್ಟರ್ ಡೋಸ್ ಪಡೆದು 26 ವಾರಗಳನ್ನು






ಸಂಪೂರ್ಣಗೊಳಿಸಿದವರಿಗೆ ಮುನ್ನೆಚ್ಚರಿಕಾ ಡೋಸ್ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.

ಜಿಲ್ಲಾ ಆಸ್ಪತ್ರೆಯ ವಾರ್ಡ್ ಸಂಖ್ಯೆ 23ರಲ್ಲಿ ಲಸಿಕಾ ವ್ಯವಸ್ಥೆ ಮಾಡಲಾಗಿದ್ದು, ಅಗತ್ಯ ದಾಖಲಾತಿಗಳನ್ನು ತಂದು ಈ ಹಿಂದೆ ಕೋವ್ಯಾಕ್ಸಿನ್ ಅಥವಾ ಕೋವಿಶೀಲ್ಡ್ ಯಾವುದೇ ಲಸಿಕೆ ಪಡೆದಿದ್ದರೂ ಕಾರ್ಬಿವ್ಯಾಕ್ಸ್ ಲಸಿಕೆ ಪಡೆಯಬಹುದಾಗಿದೆ. ಯಾವುದೇ ತೊಂದರೆ ಆಗೋದಿಲ್ಲ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಸರ್ಕಾರದ ಮಾರ್ಗಸೂಚಿಯಂತೆ ಕೋವಿಡ್ ನಿಯಂತ್ರಣಾ ನಡಾವಳಿಕೆಗಳ ಅಭ್ಯಾಸ ಮಾಡಿ ಕೋವಿಡ್ ಜೆ.ಎನ್-1ನೇ ಅಲೆಯನ್ನು ತಡೆಗಟ್ಟೋಣ ಎಂದು ತಿಳಿಸಿದ ಅವರು, ತಪ್ಪದೇ ಮಾಸ್ಕ್ ಧರಿಸುವುದು, ಸ್ಯಾನಿಟೈಜರ್ ಬಳಸಿ ಕೈಗಳ ಶುಚಿತ್ವ ಕಾಪಾಡಿಕೊಳ್ಳುವುದು, ಜಾತ್ರೆ, ಹಬ್ಬ, ಜನಸಂದಣಿ ಸ್ಥಳಗಳಿಂದ ದೂರವಿರುವುದು, ಶೀತ, ಕೆಮ್ಮು, ಜ್ವರ, ನೆಗಡಿ ಬಂದಾಗ ತಪ್ಪದೇ ಕೋವಿಡ್ ಪರೀಕ್ಷೆ ತಪಾಸಣೆ ಮಾಡಿಸಿಕೊಳ್ಳುವುದು. ಸಾರ್ವಜನಿಕ ಸ್ಥಳಗಳಲ್ಲಿ ಕೆಮ್ಮುವಾಗ, ಸೀನುವಾಗ ಮುಂಜಾಗ್ರತೆ ವಹಿಸುವುದು ಪ್ರಮುಖವಾಗಿದೆ ಎಂದು ತಿಳಿಸಿದರು.

ಲಸಿಕಾ ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿಗಳಾದ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಸಾರ್ವಜನಿಕರು ಮುನ್ನೆಚ್ಚರಿಕಾ ಡೋಸ್ ಲಸಿಕೆ ಪಡೆದರು.ಜಿಲ್ಲಾ ಲಸಿಕಾ ವ್ಯವಸ್ಥಾಪಕ ವೀರೇಶ್, ಚಿತ್ರದುರ್ಗ ತಾಲ್ಲೂಕು ವ್ಯವಸ್ಥಾಪಕ ಮೊಹಮ್ಮದ್ ಅಲಿ, ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಕಾತ್ಯಾಯನಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಭಾಗ್ಯಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿ ಗಂಗಾಧರ್ ರೆಡ್ಡಿ, ಹಿರಿಯ ನಾಗರಿಕರು ಇದ್ದರು.

# ಹೊಳಲ್ಕೆರೆ ಗಂಗಸಮುದ್ರದಲ್ಲಿ ಅಯ್ಯಪ್ಪ ಸ್ವಾಮಿ ಪಂಚಾಮೃತಾಭಿಷೇಕ ಪೂಜಾ ಕಾರ್ಯಕ್ರಮ

» **ಹೊಳಲ್ಕೆರೆ**

ತಾಲೂಕಿನ ಗಂಗಸಮುದ್ರ ಗ್ರಾಮದ ಶ್ರೀ ಧರ್ಮಶಾಸ್ತ ಸೇವಾ ಸಮಿತಿ ವತಿಯಿಂದ ಶ್ರೀ ಗಣಪತಿ ಸ್ವಾಮಿ ಸನ್ನಿಧಾನದಲ್ಲಿ ನಡೆದ ಅಯ್ಯಪ್ಪ ಸ್ವಾಮಿ ಪಂಚಾಮೃತ ಅಭಿಷೇಕ ಅತ್ಯಂತ ಭಕ್ತಿ ಮತ್ತು ಸಡಗರದಿಂದ ನೆರವೇರಿತು.

ಶ್ರೀ ಅಯ್ಯಪ್ಪ ಸ್ವಾಮಿ ಪ್ರಧಾನ ಶ್ರೀ ಅರ್ಚಕರಾದ ಬಾಲಚಂದ್ರ ಸ್ವಾಮಿಯವರಿಂದ, ಮೊದಲು ಹಾಲಿನ ಅಭಿಷೇಕ,ತುಪ್ಪದ ಅಭಿಷೇಕ, ವಿವಿಧ ಹಣ್ಣುಗಳ ಅಭಿಷೇಕ, ಹೀಗೆ ವಿವಿಧ ಪಂಚಾಮೃತಗಳಿಂದ ಅಭಿಷೇಕ ಮಾಡಿದ ಶ್ರೀಗಳು ನಂತರ ಪುಷ್ಪಾಲಂಕೃತ ಸ್ವಾಮಿಗೆ ವಿಶೇಷ ಪೂಜಾ ಕಾರ್ಯಕ್ರಮ ನೆರವೇರಿತು.

ಬೆಳಿಗ್ಗೆಯಿಂದಲೇ ಶ್ರೀ ಅಯ್ಯಪ್ಪ ಸ್ವಾಮಿಗೆ ದಿಂಡಿನ ಅಲಂಕೃತ ಮಂಟಪ ನಿರ್ಮಾಣ ಮಾಡಿ ಶ್ರೀ ಅಯ್ಯಪ್ಪ ಸ್ವಾಮಿ ಉತ್ಸವಮೂರ್ತಿ, ವಿಘ್ನ ವಿನಾಯಕ, ಮತ್ತು ಶ್ರೀ ಸುಬ್ರಹ್ಮಣ್ಯ ಸ್ವಾಮಿಯನ್ನು ಮಂಟಪದಲ್ಲಿ ಕುಳ್ಳಿರಿಸಿ, ಗೌಡಿಹಳ್ಳಿಯ ಗುರುಸ್ವಾಮಿ ಶ್ರೀ ಸ್ವಾಮಿಯವರು ವಿಶೇಷ ಪೂಜೆಯನ್ನು ನೆರವೇರಿಸಿದರು.



ಪಂಚಾಮೃತ ಅಭಿಷೇಕ ಪೂಜಾ ಕಾರ್ಯಕ್ರಮಕ್ಕೆ ಪಕ್ಕದ ಗೌಡಿಹಳ್ಳಿ ಎಂಜಿ ಹಳ್ಳಿ ರಾಮಗಿರಿ ಅರಬಗಟ್ಟೆ ತಾಳಕಟ್ಟ, ಮಾವಿನಕಟ್ಟೆ ಕಬ್ಬಳ ಗ್ರಾಮಗಳಿಂದ ನೂರಾರು ಸಂಖ್ಯೆಯಲ್ಲಿ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳು ಈ ಪೂಜಾ ಕಾರ್ಯಕ್ರಮಕ್ಕೆ ಆಗಮಿಸಿ ಭಕ್ತಿಯ ಪರಾಕಾಷ್ಠೆ ಮೆರೆದರು.ನಂತರ ಗ್ರಾಮದಲ್ಲಿ ಅನ್ನದಾಸೋಹ ಕಾರ್ಯಕ್ರಮ ನೆರವೇರಿಸಿದ ಮಾಲಾಧಾರಿಗಳು ಇರುಮುಡಿ ಕಟ್ಟಿಕೊಂಡು ಸಂಜೆ ಶಬರಿಮಲೆ ಅಯ್ಯಪ್ಪ ಸ್ವಾಮಿ ಯಾತ್ರೆ ಕೈಗೊಂಡರು

ಈ ಕಾರ್ಯಕ್ರಮದಲ್ಲಿ ಅಯ್ಯಪ್ಪ ಮಾಲಾಧಾರಿಗಳಾದ ಲೋಕೇಶ್, ಹರೀಶ್,ಪ್ರವೀಣ್,ಸ್ವಾಮಿ.ಪಾಂಡು,ಮಂಜುನಾಥ್ ,ತುಂಬಿನಕೆರೆ ಬಸವರಾಜ್,ಮಂಜುನಾಥ್, ಪಾಂಡು,ರಂಗಸ್ವಾಮಿ, ಜಯಣ್ಣ, ಹಾಗೂ ಧರ್ಮಶಾಸ್ತ್ರ ಸ್ವಾಮಿ ಸೇವಾ ಸಮಿತಿಯವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಫುಲೆ ಅಕ್ಷರ ದಾಸೋಹಿ



» **ಪರಶುರಾಂಪುರ**

ಸಾವಿತ್ರಿಬಾಯಿ ಫುಲೆ ಅಕ್ಷರ ದಾಸೋಹಿಯಾಗಿದ್ದರು' ಎಂದು ಮುಖ್ಯ ಶಿಕ್ಷಕ ಹನುಮಂತರಾಯಪ್ಪ ಅಭಿಪ್ರಾಯಪಟ್ಟರು.

ದೊಡ್ಡಚೆಲ್ಲೂರು ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಸಾವಿತ್ರಿಬಾಯಿ ಫುಲೆ ಅವರ ಜಯಂತಿ ಪ್ರಯುಕ್ತ ಬುಧವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

'ಅಂದಿನ ಕಾಲದಲ್ಲಿ ಹೆಣ್ಣುಮಕ್ಕಳು ಮನೆ ಬಿಟ್ಟು ಕರ್ತವ್ಯಕ್ಕೆ ಹೊರಗೆ ಹೋಗಬಾರದು ಎನ್ನುವ ಕಟ್ಟಪ್ಪಣೆ ಇದ್ದರೂ ಲೋಕಕ್ಕೆ ಶಿಕ್ಷಣದ ಅವಶ್ಯಕತೆ ಇದೆ ಎಂದು ಮನಗಂಡು ಅಸಂಖ್ಯಾತ ಜನರಿಗೆ ಅಕ್ಷರ ಜ್ಞಾನ ನೀಡಿದ್ದರು. ಮಹಿಳಾ ಶಿಕ್ಷಣಕ್ಕೆ ಒತ್ತುಕೊಟ್ಟಿದ್ದರು' ಹಾಗೂ 'ಧನಾತ್ಮಕ ವಿಚಾರ, ಆತ್ಮವಿಶ್ವಾಸ, ಧೈರ್ಯ ಅವರಿಗೆ ಪ್ರೇರಣೆಯಾಗಿದ್ದವು. ವಿದ್ಯಾರ್ಥಿಗಳು ಫುಲೆ ಅವರ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು' ಎಂದು ತಿಳಿಸಿದರು.

ಈ ವೇಳೆಯಲ್ಲಿ ಶಾಲಾ ಶಿಕ್ಷಕರು ಸೇರಿದಂತೆ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

**ಕೇಬಲ್ ಟೆವಿಲಿಷನ್ ಮೇಲ್ವಿಚಾರಣಾ ಸಮಿತಿ ಸಭೆ**

# ಜಾಹಿರಾತು ಸಂಹಿತೆ ಪಾಲನೆ ಮಾಡುವುದು ಕಡ್ಡಾಯ; ಜಿಲ್ಲಾಧಿಕಾರಿ

» **ದಾವಣಗೆರೆ**

,ಜನವರಿ.03(ಕರ್ನಾಟಕ ವಾರ್ತೆ) ಕೇಬಲ್ ಟೆಲಿವಿಷನ್ ನೆಟ್‌ವರ್ಕ್ ಕಾಯಿದೆಯಡಿ ವಾಹಿನಿಗಳು ಕಾರ್ಯಕ್ರಮ ಮತ್ತು ಜಾಹಿರಾತು ಸಂಹಿತೆಯನ್ನು ಪಾಲನೆ ಮಾಡಬೇಕು ಮತ್ತು ಕೇಬಲ್ ಆಪರೇಟರ್‌ಗಳು ನಿಗಧಿತ ದರಕ್ಕಿಂತ ಹೆಚ್ಚು ವಸೂಲು ಮಾಡಬಾರದು ಎಂದು ಜಿಲ್ಲಾಧಿಕಾರಿ ಹಾಗೂ ಕೇಬಲ್‌ನೆಟ್ ವರ್ಕ್ ಕಾಯಿದೆ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಹಾಗೂ ನಿರ್ವಹಣಾ ಸಮಿತಿ ಅಧ್ಯಕ್ಷರಾದ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಕೇಬಲ್ ಟೆಲಿವಿಷನ್ ಆಕ್ಟ್ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಹಾಗೂ ನಿರ್ವಹಣಾ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸ್ಯಾಟಲೈಟ್ ಮೂಲಕ ಸಿಗ್ನಲ್‌ಗಳನ್ನು ರಿಸೀವರ್



ಮೂಲಕ ಪಡೆದು ಮರು ಪ್ರಸಾರ ಮಾಡುವವರನ್ನು ಕೇಬಲ್ ಆಪರೇಟರ್‌ಗಳೆಂದು ಕರೆಯಲಾಗುತ್ತದೆ. ಅಧಿಕೃತ ಕೇಬಲ್ ಆಪರೇಟರ್‌ಗಳು ಜಿಲ್ಲಾ ಮಟ್ಟದ ಪ್ರಧಾನ ಅಂಚೆ ಕಚೇರಿಯಲ್ಲಿ ನೊಂದಣಿ ಮಾಡಿಸಿ ಕೇಬಲ್ ಆಪರೇಟರ್ ಲೈಸೆನ್ಸ್ ಪಡೆಯುವುದು ಕಡ್ಡಾಯವಾಗಿದೆ ಎಂದರು.

ಟಿ.ವಿ.ಚಾನಲ್‌ಗಳು ಕಾರ್ಯಕ್ರಮ ಮತ್ತು ಜಾಹಿರಾತು ಸಂಹಿತೆಯನ್ನು ಸ್ವಯಂ ಕಾಪಾಡಿಕೊಳ್ಳಬೇಕು. ಆಕ್ಷೇಪಾರ್ಹ ಪದ ಬಳಕೆ, ದೃಶ್ಯ ಪ್ರಸಾರವನ್ನು ಮಾಡಬಾರದು. ಜನರನ್ನು ಪ್ರಚೋದನೆಗೆ ಗುರಿ ಮಾಡುವ ಮತ್ತು ಹಿಂಸೆಗೆ ಪ್ರಚೋದನಾಕಾರಿಯಾದ ಯಾವುದೇ ದೃಶ್ಯವಾಗಲಿ ಮತ್ತು ಹೇಳಿಕೆಯನ್ನು ಪ್ರಸಾರ ಮಾಡಬಾರದು. ಲಿಂಗತಾರತಮ್ಯವಿಲ್ಲದೆ ಮಹಿಳೆಯರು, ಮಕ್ಕಳ ಮೇಲೆ ಪರಿಣಾಮ ಬೀರುವ ಕಾರ್ಯಕ್ರಮಗಳನ್ನು ಪ್ರಸಾರ ಮಾಡದಿರುವ ಬಗ್ಗೆ ಸ್ವಯಂ ನಿಯಂತ್ರಣ ಮಾಡಿಕೊಳ್ಳಬೇಕು. ಮತ್ತು ಯಾವುದೇ ಕಾರ್ಯಕ್ರಮ ಮತ್ತು ಜಾಹಿರಾತು ಸಂಹಿತೆ ಉಲ್ಲಂಘನೆ ಮಾಡಿರುವುದು ಕಂಡು ಬಂದಲ್ಲಿ ಸಾರ್ವಜನಿಕರು ಈ ಸಮಿತಿಗೆ ದೂರು ನೀಡಲು ಮುಕ್ತ ಅವಕಾಶ ಇರುತ್ತದೆ. ದೂರನ್ನು ಜಿಲ್ಲಾಧಿಕಾರಿಗಳ ಕಚೇರಿಗೆ, ಜಿಲ್ಲಾ ರಕ್ಷಣಾಧಿಕಾರಿಗಳ ಕಚೇರಿಗೆ ಅಥವಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ನೀಡಬಹುದಾಗಿದೆ ಎಂದರು.

ಗುಣಮಟ್ಟದ ಸೇವೆ; ಕೇಬಲ್ ಆಪರೇಟರ್‌ಗಳು ಗ್ರಾಹಕರಿಗೆ ಗುಣಮಟ್ಟದ ಸೇವೆಯ ಜೊತೆಗೆ ಟ್ರಾಯ್ ನಿಗದಿ ಮಾಡಿರುವ ದರವನ್ನು ಮಾತ್ರ ಕೇಬಲ್ ಆಪರೇಟರ್‌ಗಳು ಪಡೆದುಕೊಳ್ಳಬೇಕು. ನಿಗಧಿತ ದರಕ್ಕಿಂತ ಹೆಚ್ಚು ದರವನ್ನು ಗ್ರಾಹಕರಿಂದ ವಸೂಲು ಮಾಡಿದಲ್ಲಿ, ಅಂತಹ ಕೇಬಲ್ ಆಪರೇಟರ್‌ಗಳ ಪರಿಕರಗಳನ್ನು ಮುಟ್ಟುಗೋಲು ಹಾಕಿಕೊಂಡು ಪ್ರಕರಣ ದಾಖಲು ಮಾಡಲಾಗುತ್ತದೆ. ಯಾವುದೇ ದೂರುಗಳಿದ್ದಲ್ಲಿ ಸಾರ್ವಜನಿಕರು ದಾಖಲೆಗಳೊಂದಿಗೆ ನೀಡಬಹುದಾಗಿದೆ. ಸಾಮಾಜಿಕ ಜಾಲತಾಣ ಮತ್ತು ಯೂಟ್ಯೂಬರ್‌ಗಳ ಮೇಲೆ ನಿಗಾ; ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳುಸುದ್ದಿ ಹಬ್ಬಿಸಿ ಸಮಾಜದಲ್ಲಿ ಗಾಬರಿ ಹುಟ್ಟಿಸುವ ಸಂದೇಶ, ಅಶ್ಲೀಲ ಸಂದೇಶ, ದೃಶ್ಯಗಳನ್ನು ಬಿತ್ತರಿಸುವವರ ಮೇಲೆ ನಿಗಾವಹಿಸಿ ನಾಗರಿಕ ಸಂಹಿತೆಯಡಿ ಕ್ರಮ ಕೈಗೊಳ್ಳಲಾಗುತ್ತದೆ.

**ಪ್ರಮುಖ ಸುದ್ದಿ**

**ಯಾದಲಗಟ್ಟೆ ಗ್ರಾಮಕ್ಕೆ ಕುಡಿಯುವ ನೀರಿನ ವ್ಯವಸ್ಥೆ ಸರಿಪಡಿಸಿದ ಅಧಿಕಾರಿಗಳು**

# 80 ಸಾವಿರ ವೆಚ್ಚದಲ್ಲಿ ಪಂಪ್, ಮೋಟಾರ್ ಅಳವಡಿಕೆ

» **ಚಳ್ಳಕೆರೆ**

ಕಳೆದ ಹಲವಾರು ತಿಂಗಳುಗಳಿಂದ ಕುಡಿಯುವ ನೀರಿಗಾಗಿ ಅಲೆದಾಡುತ್ತಿದ್ದ ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯಾದಲಗಟ್ಟೆ ಗ್ರಾಮದ ನೀರಿನ ಸಮಸ್ಯೆಯ ಬಗ್ಗೆ ಪತ್ರಿಕೆ ವಿಸ್ತಾರ ವರದಿ ಪ್ರಕಟಿಸಿದ ಹಿನ್ನೆಲೆಯಲ್ಲಿ ಕೊನೆಗೂ ಗ್ರಾಮ ಪಂಚಾಯಿತಿ ಆಡಳಿತ ಎಚ್ಚೆತ್ತು ಸುಮಾರು 80 ಸಾವಿರ ಮೌಲ್ಯದ ಪಂಪ್, ಮೋಟರ್ ಅಳವಡಿಸಿ ಗ್ರಾಮಕ್ಕೆ ಕುಡಿಯುವ ನೀರಿನ ವ್ಯವಸ್ಥೆ ಮಾಡಿದೆ.

ಪತ್ರಿಕೆ ಕಳೆದ ವಾರ ವರದಿಯನ್ನು ಪ್ರಕಟಿಸಿದ ಕೂಡಲೇ ಪಿಡಿಒ ರಂಜನಿಕಾಂತ್ ಸಮಸ್ಯೆ ಕುರಿತು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಯ ಗಮನಕ್ಕೆ ತಂದ ಹಿನ್ನೆಲೆಯಲ್ಲಿ ಸುಮಾರು 80



ಸಾವಿರ ವೆಚ್ಚದಲ್ಲಿ ಸುಮಾರು ಗ್ರಾಮದ ಹೊರವಲಯದಿಂದ ಒಂದು ಕಿ.ಮೀ ದೂರದಿಂದಪೈಪ್‌ಲೈನ್‌ಅಳವಡಿಸಿಗ್ರಾಮಕ್ಕೆ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ. ಈ ಬಗ್ಗೆ ಮಾತನಾಡಿದ ತಾಪಂ ಕಾರ್ಯನಿರ್ವಹಣಾಧಿಕಾರಿ ಶಶಿಧರ, ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಗಮನಕ್ಕೆ ಬಂದಕೂಡಲೇ ಭೇಟಿ ನೀಡಿ ಅಲ್ಲಿನ ಸಮಸ್ಯೆಯನ್ನು ಆಲಿಸಿ, ಗ್ರಾಮದಲ್ಲಿ ಹಾಲಿ ಇದ್ದ ಬೋರ್‌ವೆಲ್‌ನಲ್ಲಿ ನೀರು ನಿಂತುಹೋದ ಹಿನ್ನೆಲೆಯಲ್ಲಿ ಈ ಸಮಸ್ಯೆ ಉಂಟಾಗಿತ್ತು. ಕೂಡಲೇ ಪಿಡಿಒಗೆ ಸೂಚನೆ ನೀಡಿ ಗ್ರಾಮದ ಹೊರವಲಯದಲ್ಲಿರುವ ಕೊಳವೆಬಾವಿಗೆ ನೂತನ ಪಂಪ್, ಮೋಟರ್ ಅಳವಡಿಸಿ ಗ್ರಾಮಕ್ಕೆ ನೀರು ಸರಬರಾಜು ಮಾಡುವಂತೆ ಸೂಚನೆ ನೀಡಿದ್ದೇ. ಕೂಡಲೇ ಕಾರ್ಯಪ್ರವೃತ್ತರಾದ ಅಧಿಕಾರಿಗಳು ಗ್ರಾಮಕ್ಕೆ ನೀರು ಕೊಡುವಲ್ಲಿ ಸಫಲರಾಗಿದ್ದಾರೆ. ಈ ಬಗ್ಗೆ ಮಾತನಾಡಿದ ಗ್ರಾಮದ ಮುಖಂಡರಾದ ಯಾದಗಲಟ್ಟೆ ಜಗನ್ನಾಥ, ಚಿಕ್ಕಣ್ಣ, ಓಬಳೇಶಪ್ಪ, ತಿಪ್ಪೇಸ್ವಾಮಿ, ರಂಗಸ್ವಾಮಿ, ಮಹಂತೇಶ್, ಮೈರಾಡಪಾಲಯ್ಯ, ಗ್ರಾಮದಲ್ಲಿ ನೀರಿನ ಬಹುದೊಡ್ಡ ಸಮಸ್ಯೆಯಾಗಿತ್ತು. ಸುಮಾರು ಮೂರ್‍ನಾಲ್ಕು ಕಿ.ಮೀ ದೂರದ ಕಪ್ಪಿಲೆಗಳಿಂದ ನೀರು ತರಬೇಕಿತ್ತು. ಈ ಬಗ್ಗೆ ಪತ್ರಿಕೆಗಳಲ್ಲಿ ವರದಿ ಪ್ರಕಟವಾದ ಕೂಡಲೇ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ಸುಮಾರು ಒಂದು ಕಿ.ಮೀ ದೂರದಿಂದ ಪೈಪ್‌ಲೈನ್ ಅಳವಡಿಕೆ ಮಾಡಿ ನೀರಿನ ವ್ಯವಸ್ಥೆ ಮಾಡಿದ್ದಾರೆಂದು ಸಂತಸ ವ್ಯಕ್ತಪಡಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T